# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 79 | MONDAY 01-06-2026 | PRGI No : KNKAN/26/A0962 | Pages:4 | Rs.2.00 | M: 9742418836

## ಅಭಿವೃದ್ಧಿಯ ಬಂಡಿಯನ್ನು ಮುಂದಕ್ಕೆ ಎಳೆದೊಯ್ಯುವ ಜವಾಬ್ದಾರಿ ನಿಮ್ಮ ಹೆಗಲ ಮೇಲಿದೆ: ಡಿಕೆಶಿಗೆ ಸಿದ್ದು ಪತ್ರ!



ಬೆಂಗಳೂರು: ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕರಾಗಿ ಡಿ.ಕೆ.ಶಿವಕುಮಾರ್ ಆಯ್ಕೆಯಾದ ನಂತರ ಅವರಿಗೆ ಸಿದ್ದರಾಮಯ್ಯ ಭಾವನಾತ್ಮಕ ಪತ್ರ ಬರೆದಿದ್ದಾರೆ.

ಇಂದು ಕರ್ನಾಟಕ ತಲಾವಾರು ಆದಾಯದಲ್ಲಿ ದೇಶದಲ್ಲಿ ಮೊದಲನೇ ಸ್ಥಾನದಲ್ಲಿರುವುದು ಮಾತ್ರವಲ್ಲ ಸಂಪತ್ತು, ಅಧಿಕಾರ ಮತ್ತು ಅವಕಾಶಗಳ ಸಮಾನ ಹಂಚಿಕೆಯಲ್ಲಿಯೂ ದೇಶಕ್ಕೆ ಮಾದರಿಯಾಗಿದೆ. ನಾವು ಪ್ರಾರಂಭಿಸಿರುವ ಪ್ರತಿಯೊಂದು ಯೋಜನೆಯನ್ನೂ ಉಳಿದ ರಾಜ್ಯಗಳು ಮಾದರಿಯಾಗಿ ಸ್ವೀಕರಿಸಿ ಅನುಷ್ಠಾನಕ್ಕೆ ತರುತ್ತಿರುವುದು ನಮಗೆಲ್ಲರಿಗೂ ಹೆಮ್ಮೆಯ ಸಂಗತಿಯಾಗಿದೆ.

ಒಟ್ಟು ಎಂಟು ವರ್ಷಗಳ ಕಾಲ ರಾಜ್ಯದ ಮುಖ್ಯಮಂತ್ರಿಯಾಗಿ ಕನ್ನಡಿಗರ ಸೇವೆಯನ್ನು ಮಾಡಲು ಒದಗಿಬಂದಿದ್ದ ಅವಕಾಶವನ್ನು ಬಳಸಿಕೊಂಡು ಕರ್ನಾಟಕವನ್ನು ಸಮೃದ್ಧ, ಸ್ವಾವಲಂಬಿ ಮತ್ತು ಸ್ವಾಭಿಮಾನಿ ರಾಜ್ಯವನ್ನಾಗಿ ಅಭಿವೃದ್ಧಿ ಪಡಿಸಿದ ಹೆಮ್ಮೆ ನನ್ನದಾಗಿದೆ. ಈ ಅಭಿವೃದ್ಧಿಯ ಬಂಡಿಯನ್ನು ಮುಂದಕ್ಕೆ ಎಳೆದೊಯ್ಯುವ ಜವಾಬ್ದಾರಿ ನಿಮ್ಮ ಹೆಗಲ ಮೇಲಿದೆ. ಅದಕ್ಕೆ ಬೇಕಾಗಿರುವ ಬದ್ದತೆ, ಸಾಮರ್ಥ್ಯ ಮತ್ತು ಮುನ್ನೋಟ ನಿಮ್ಮಲ್ಲಿದೆ ಎನ್ನುವ ನಂಬಿಕೆ ನನ್ನದು ಎಂದಿದ್ದಾರೆ.

ಇಡೀ ದೇಶ ಇಂದು ಆರ್ಥಿಕ ಅಭದ್ರತೆಯಲ್ಲಿ ಭೀತಿಗೊಳಗಾಗಿರುವ ಸ್ಥಿತಿಯಲ್ಲಿ ರಾಜ್ಯದ ಜನತೆ ಕೂಡಾ ಭವಿಷ್ಯದ ಬಗ್ಗೆ ಆತಂಕಿತರಾಗಿದ್ದಾರೆ. ಸಮರ್ಥ ಆಡಳಿತದ ಮೂಲಕ ಅವರಲ್ಲಿ ಭರವಸೆಯನ್ನು ಹುಟ್ಟಿಸುವ ಜೊತೆಯಲ್ಲಿ ರಾಜ್ಯವನ್ನು ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸುವ ಜವಾಬ್ದಾರಿ ನಿಮ್ಮ ಮೇಲಿದೆ ಎಂದಿದ್ದಾರೆ.

ಇತ್ತೀಚಿನ ದಿನಗಳಲ್ಲಿ ರಾಷ್ಟ್ರಮಟ್ಟದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ರಾಜಕೀಯವಾಗಿ ಸ್ವಲ್ಪ ಹಿನ್ನಡೆಯಾಗಿದೆ. ನಾವು ಚುನಾವಣೆಯಲ್ಲಿ ಸೋಲಬಹುದು, ಗೆಲ್ಲಬಹುದು. ಆದರೆ ಸೈದ್ಧಾಂತಿಕವಾಗಿ ಎಂದೂ ಸೋಲಬಾರದು. ಒಂದು ರಾಜಕೀಯ ಪಕ್ಷ ಸೈದ್ಧಾಂತಿಕವಾಗಿ ಸೋತರೆ ಆ ಪಕ್ಷ ಚುನಾವಣೆಯನ್ನು ಗೆಲ್ಲಲಾಗದೆ ನಾಶವಾಗುತ್ತದೆ ಎಂದು ನಂಬಿದವನು ನಾನು. ರಾಜ್ಯದ ಅಭಿವೃದ್ಧಿಯ ಜೊತೆಯಲ್ಲಿ ನಮ್ಮೆಲ್ಲರ ಮಾತೃಸ್ವರೂಪಿಯಾಗಿರುವ ಕಾಂಗ್ರೆಸ್ ಪಕ್ಷದ ಗತವೈಭವವನ್ನು ಮರಳಿ ಸ್ಥಾಪಿಸುವ ಹೊಣೆಗಾರಿಕೆ ಕೂಡಾ ನಮ್ಮೆಲ್ಲರ ಮೇಲಿದೆ ಎಂದು ಹೇಳಿದ್ದಾರೆ.

ಕಾಂಗ್ರೆಸ್ ಪಕ್ಷ ಇಂತಹ ಸವಾಲಿನ ಅನೇಕ ಅಗ್ನಿದಿವ್ಯಗಳನ್ನು ಯಶಸ್ವಿಯಾಗಿ ದಾಟಿ ಬಂದಿರುವ ಇತಿಹಾಸ ನಮಗೆಲ್ಲರಿಗೂ ಪ್ರೇರಣೆಯಾಗಲಿ. ನಿಮ್ಮ ನಾಯಕತ್ವ ಬಲ ಈ ಪ್ರಯತ್ನವನ್ನು ಸಫಲಗೊಳಿಸಲಿ ಎಂದು ಸಲಹೆ ನೀಡಿದ್ದಾರೆ.

ಸಂವಿಧಾನದ ಆಶಯಗಳಾದ ಸಮಾನತೆ, ಸೌಹಾರ್ದತೆ, ಸಾಮಾಜಿಕ ನ್ಯಾಯ ಮತ್ತು ಜಾತ್ಯತೀತತೆಯ ಮೌಲ್ಯಗಳನ್ನೇ ತನ್ನ ಸಿದ್ಧಾಂತವಾಗಿ ಸ್ವೀಕರಿಸಿರುವ ಕಾಂಗ್ರೆಸ್ ಪಕ್ಷವನ್ನು ಸೈದ್ಧಾಂತಿಕವಾಗಿ ತಳಮಟ್ಟದಿಂದಲೇ ಗಟ್ಟಿಗೊಳಿಸಲು ಮುಂದಾಗುವುದೇ ದೇಶವನ್ನು ಉಳಿಸಲು ನಮಗೆ ಇರುವ ಏಕೈಕ ಮತ್ತು ಸರಿಯಾದ ದಾರಿಯಾಗಿದೆ. ದೇಶದ ಏಕತೆ, ಸಮಗ್ರತೆಯನ್ನು ಉಳಿಸಲು ಸಂವಿಧಾನದ ಗೌರವವನ್ನು ಕಾಪಾಡಲು ಎರಡನೇ ಸ್ವಾತಂತ್ರ್ಯ ಹೋರಾಟ ನಡೆಸಬೇಕಾಗಿರುವ ಕಾಲಘಟ್ಟದಲ್ಲಿ ನಾವಿದ್ದೇವೆ. ಈ ಹೋರಾಟದಲ್ಲಿ ಇಡೀ ಶಾಸಕಾಂಗ ಪಕ್ಷ ಮಾತ್ರವಲ್ಲ ರಾಜ್ಯದ ಏಳುಕೋಟಿ ಜನತೆ ನಿಮ್ಮ ಜೊತೆಯಲ್ಲಿರುತ್ತದೆ ಎಂದು ಧೈರ್ಯ ನೀಡಿದ್ದಾರೆ.

## ಸಮಗ್ರತೆ, ಸಮರ್ಪಣೆ ಉದ್ದೇಶದೊಂದಿಗೆ ಕರ್ನಾಟಕ ಜನತೆಗೆ ಸೇವೆ ಸಲ್ಲಿಸಲು ಬದ್ಧ



ಬೆಂಗಳೂರು: ಸಮಗ್ರತೆ, ಸಮರ್ಪಣೆ ಉದ್ದೇಶದೊಂದಿಗೆ ಕರ್ನಾಟಕ ಜನತೆಗೆ ಸೇವೆ ಸಲ್ಲಿಸಲು ತಮ್ಮ ಮತ್ತು ಕಾಂಗ್ರೆಸ್ ಪಕ್ಷದ ಬದ್ಧತೆಯನ್ನು ನಿಯೋಜಿತ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ವ್ಯಕ್ತಪಡಿಸಿದರು. ರಾಜ್ಯ ಕಾಂಗ್ರೆಸ್ ಅಧ್ಯಕ್ಷರಾಗಿರುವ ಶಿವಕುಮಾರ್ ಜೂನ್ 3ರಂದು ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ಸಿಎಲ್‌ಪಿ ನಾಯಕರಾಗಿ ಆಯ್ಕೆಯಾದ ಕೂಡಲೇ, ಶಿವಕುಮಾರ್ ಅವರು ಲೋಕ ಭವನದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರನ್ನು ಭೇಟಿ ಮಾಡಿ ಸರ್ಕಾರ ರಚಿಸಲು ಹಕ್ಕು ಮಂಡಿಸಿದರು. ತರುವಾಯ ರಾಜ್ಯಪಾಲರು ರಾಜ್ಯದ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಲು ಡಿಕೆಶಿಯನ್ನು ಆಹ್ವಾನಿಸಿದರು. ಜೂನ್ 3ರಂದು ಸಂಜೆ 4:05ಕ್ಕೆ ಲೋಕ ಭವನ ಆವರಣದಲ್ಲಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

ಇಂದು ವಿಧಾನಸೌಧದಲ್ಲಿ ನಡೆದ ಸಿಎಲ್‌ಪಿ ಸಭೆಯಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕನಾಗಿ ನನ್ನನ್ನು ಸರ್ವಾನುಮತದಿಂದ ಆಯ್ಕೆ ಮಾಡಿದ್ದಕ್ಕೆ ನಾನು ವಿನಮ್ರನಾಗಿದ್ದೇನೆ ಎಂದು ಶಿವಕುಮಾರ್ 'ಘ' ನಲ್ಲಿ ಪೋಸ್ಟ್ ಮಾಡಿದ್ದಾರೆ. ನಾವು ರಾಜ್ಯದ ಜನರಿಗೆ ಸಮರ್ಪಣೆ, ಸಮಗ್ರತೆ ಮತ್ತು ಉದ್ದೇಶದೊಂದಿಗೆ ಸೇವೆ ಸಲ್ಲಿಸಲು ಬದ್ಧರಾಗಿದ್ದೇನೆ ಎಂದು ಅವರು ಹೇಳಿದರು.

ಗುರುವಾರ ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ನೀಡಿದರು. ನಂತರ ರಾಜ್ಯಪಾಲ ಗೆಹ್ಲೋಟ್ ಅವರು ಮರುದಿನ ಅವರ ರಾಜೀನಾಮೆಯನ್ನು ಅಂಗೀಕರಿಸಿದ್ದು ಸಚಿವ ಸಂಪುಟವನ್ನು ವಿಸರ್ಜಿಸಿದರು.

## "ಅಧಿಕಾರ ಕೇಳಿ ಪಡೆಯುವ ಜಾಯಮಾನ ನನ್ನದಲ್ಲ"

### ಲಾಬಿಯಿಂದ ದೂರ, ನಾಯಕತ್ವದ ಬಲದಿಂದ ಸಚಿವ ಸ್ಥಾನ ನಿರೀಕ್ಷೆ; ರಾಜು ಕಾಗೆ



ಮೋಳೆ ;-ರಾಜ್ಯ ಕಾಂಗ್ರೆಸ್ ಸರ್ಕಾರದ ಸಚಿವ ಸಂಪುಟ ಪುನರ್‌ರಚನೆ ಚರ್ಚೆ ತೀವ್ರಗೊಂಡಿರುವ ನಡುವೆಯೇ ಉತ್ತರ ಕರ್ನಾಟಕದ ಹಿರಿಯ ನಾಯಕ ಹಾಗೂ ಶಾಸಕ ರಾಜು ಕಾಗೆ ಸಚಿವ ಸ್ಥಾನದ ಕುರಿತು ತಮ್ಮ ಅಭಿಲಾಷೆಯನ್ನು ಬಹಿರಂಗ ಪಡಿಸಿದ್ದಾರೆ.

ಅವರು ಶನಿವಾರ ಉಗಾರ್ ಪಟ್ಟಣದ ಸ್ವ ಗ್ರಾಮದಲ್ಲಿ ಮಾತನಾಡಿದ ಅವರು, "ಅಧಿಕಾರ ಕೇಳಿ ಪಡೆಯುವ ಜಾಯಮಾನ ನನ್ನದಲ್ಲ". ನನ್ನ ಯೋಗ್ಯತೆ, ರಾಜಕೀಯ ಅನುಭವ ಪರಿಗಣಿಸಿ ಅವಕಾಶ ನೀಡಿದರೆ ಸಚಿವ ಸ್ಥಾನವನ್ನು ಸಮರ್ಥವಾಗಿ ನಿಭಾಯಿಸುತ್ತೇನೆ. ನನಗೆ ಸಚಿವ ಸ್ಥಾನದ ಅಭಿಲಾಷೆ ಇದೆ, ಆದರೆ ದುರಾಸೆ ಇಲ್ಲ" ಎಂದು ಹೇಳಿದರು.

ಸದ್ಯ ಆರೋಗ್ಯ ಸರಿಯಿಲ್ಲದ ಕಾರಣ ಸಿ.ಎಲ್.ಪಿ ಸಭೆಗೆ ಗೈರಾಗಿದ್ದೇನೆ, ಹೊತು ಅಸಮಾಧಾನದಿಂದಲ್ಲ. ಕೆಲವು ಮಾದ್ಯಮಗಳಲ್ಲಿ ಸಿ.ಎಲ್.ಪಿ ಸಭೆಗೆ ಕಾಗವಾಡ ಶಾಸಕ ರಾಜು ಕಾಗೆ ಗೈರು, ಅಸಮಾಧನ ಎಂದು ಮಾಧ್ಯಮಗಳು ಬಿಂಬಿಸುತ್ತಿವೆ.ಯಾವ ಅಸಮಾಧಾನ ಇಲ್ಲ. ತಾವು ತೆಗೆದುಕೊಳ್ಳುವ ನಿರ್ಣಯಕ್ಕೆ ಬದ್ಧವಾಗಿದ್ದೇನೆ ಎಂದು ಈ ಕುರಿತು ಮುಂಚಿತವಾಗಿ ಪತ್ರ ನೀಡಿದ್ದೇನೆ.

ಬೆಂಗಳೂರಿನಲ್ಲಿ ಸಚಿವ ಸ್ಥಾನದ ಲಾಬಿ ನಡೆಯುತ್ತಿರುವ ಸಂದರ್ಭದಲ್ಲೂ ತಾವು ಕ್ಷೇತ್ರದಲ್ಲೇ ಸಕ್ರಿಯವಾಗಿರುವುದಾಗಿ ಹೇಳಿದ ರಾಜು ಕಾಗೆ, "ನಾನು ಒನ್ ಮ್ಯಾನ್ ಶೋ, ಟೈಗರ್ ಸಿಂಗಲ್ ಇರುತ್ತೇನೆ. ಅಧಿಕಾರಕ್ಕಾಗಿ ಯಾರ ಬೆಂಬಲದ ಅಗತ್ಯವಿಲ್ಲ. ಯಾವುದೇ ಹುದ್ದೆ ಕೊಟ್ಟರೂ ಸಮರ್ಥವಾಗಿ ನಿರ್ವಹಿಸುವ ಸಾಮರ್ಥ್ಯ ನನ್ನಲ್ಲಿದೆ" ಎಂದು ಆತ್ಮವಿಶ್ವಾಸ ವ್ಯಕ್ತಪಡಿಸಿದರು. ಉತ್ತರ ಕರ್ನಾಟಕದ ಹಿರಿಯ ನಾಯಕತ್ವಕ್ಕೆ ಸಚಿವ ಸಂಪುಟದಲ್ಲಿ ಸ್ಥಾನ ಸಿಗಬೇಕು ಎಂಬ ಅಭಿಪ್ರಾಯವನ್ನೂ ಅವರು ವ್ಯಕ್ತಪಡಿಸಿದ್ದು, ಸಂಪುಟ ಪುನರ್‌ರಚನೆಯಲ್ಲಿ ರಾಜು ಕಾಗೆಗೆ ಅವಕಾಶ ಸಿಗಬಹುದೇ ಎಂಬ ಚರ್ಚೆ ಕಾಂಗ್ರೆಸ್ ವಲಯದಲ್ಲಿ ಜೋರಾಗಿದೆ.

## ಜೆಸಿಐ ಗೋಕಾಕ : ಪ್ರತಿಭಾ ಪುರಸ್ಕಾರ

ಗೋಕಾಕ : ಪ್ರತಿ ವರ್ಷದಂತೆ ಈ ವರ್ಷವೂ ಜೆಸಿಐ ಗೋಕಾಕ ಸಂಸ್ಥೆ ವತಿಯಿಂದ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ದಿನಾಂಕ 7–6–2026 ರಂದು ನಗರದ ವಿದ್ಯಾನಗರದಲ್ಲಿಯ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದೆ.

ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ 90 ರಷ್ಟು ಮತ್ತು ಹೆಚ್ಚಿನ ಅಂಕ ಪಡೆದ ಬೆಳಗಾವಿ ಹಾಗೂ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ ಪ್ರತಿಭಾವಂತ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ಮತ್ತು ಪ್ರಮಾಣಪತ್ರ ನೀಡಿ ನಾಡಿನ ಪೂಜ್ಯರು ಗುರುಹಿರಿಯರು ಹಾಗೂ ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ಗೌರವಿಸಿ ಸನ್ಮಾನಿಸಲಾಗುವುದು.

ಅರ್ಹತೆಯುಳ್ಳ ವಿದ್ಯಾರ್ಥಿಗಳು ತಮ್ಮ ಭಾವಚಿತ್ರ ಅಂಟಿಸಿ ಸಂಪೂರ್ಣ ವಿವರಗಳೊದಿಗೆ ಅರ್ಜಿಯನ್ನು ದಿನಾಂಕ 6– 6– 2026ರ ಒಳಗಾಗಿ ನೇರವಾಗಿ ಕಚೇರಿಗೆ ಬಂದು ಖುದ್ದಾಗಿ ಅರ್ಜಿ ಸಲ್ಲಿಸಬೇಕು ಅಥವಾ ಅಂಚೆ ಮೂಲಕ ಅರ್ಜಿ ಕಳುಹಿಸಬಹುದು.

ಅರ್ಜಿ ಸಲ್ಲಿಸುವ ವಿಳಾಸ : ಶ್ರೀರಾಮ್ ಪೌಂಡೇಶನ್ ಲಾತೂರ್ ಕಂಪ್ಯೂಟರ್ ಟೈಪಿಂಗ್ ಸೆಂಟರ್ ಕೋರ್ಟ್ ಸರ್ಕಲ್ ಕೆನರಾ ಬ್ಯಾಂಕ್ ಕೆಳಗೆ ಗೋಕಾಕ. ಹೆಚ್ಚಿನ ಮಾಹಿತಿಗಾಗಿ ಹೆಚ್ಚಿನ ಮಾಹಿತಿಗಾಗಿ ಜೆಸಿ, ವಿಷ್ಣು ಲಾತೂರ್ ವಕೀಲರು ಪೂರ್ವ ರಾಷ್ಟ್ರೀಯ ಸಂಯೋಜಕರು ಜೆ ಸಿ ಐ ಭಾರತ ಮೊಬೈಲ್ : 9448225046 ಇವರನ್ನು ಸಂಪರ್ಕಿಸಬಹುದು.

## ಮಾರ್ಗ ಸೂಚಿ ಪರಿಶೀಲನೆ



ಲಕ್ಷ್ಮೇಶ್ವರ: ಪಟ್ಟಣದ ಸರ್ಕಾರಿ ಮಾದರಿ ಪ್ರಾಥಮಿಕ ಕನ್ನಡ ಹೆಣ್ಣು ಮಕ್ಕಳ ಶಾಲೆಗೆ ಶಿರಹಟ್ಟಿ ತಾಲೂಕ ನೋಡಲ್ ಅಧಿಕಾರಿ ಹಾಗೂ ಗದಗ್ ಜಿಲ್ಲಾ ಡಟ್ ಉಪ ಪ್ರಾಚಾರ್ಯ ಜಿಎಂ ಮುಂದಿನ ಮನಿ ಅವರು ಭೇಟಿ ನೀಡಿ ಶಾಲಾ ಪ್ರಾರಂಭೋತ್ಸವದ ಮಾರ್ಗಸೂಚಿಗಳನ್ನು ಪರಿಶೀಲನೆ ಮಾಡಿದರು. ಈ ಸಂದರ್ಭದಲ್ಲಿ ಅವರು ಪ್ರಸಕ್ತ ಶೈಕ್ಷಣಿಕ ವರ್ಷ ಶಾಲಾ ಪ್ರಾರಂಭೋತ್ಸವ ಸೇತುಬಂಧ ಕಾರ್ಯಕ್ರಮ ಶಾಲಾ ವೇಳಾಪಟ್ಟಿ ಶಾಲಾ ಸ್ವಚ್ಛತೆ ಬಿಸಿಯುಟದ ವ್ಯವಸ್ಥೆ ಪಠ್ಯಪುಸ್ತಕ ಮತ್ತು ಸಮಸ್ಯೆ ವಿತರಣೆ ಮುಂತಾದ ಸರ್ಕಾರದ ಯೋಜನೆಗಳ ಕುರಿತು ಮಾರ್ಗದರ್ಶನ ಮಾಡಿದರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ಬಸವರಾಜ್ ಕುಂಬಾರ್ ಸಿಆರ್‌ಪಿ ಶ್ರೀನಿವಾಸ್ ಮತ್ತೂ ರ ಇದ್ದರು.

## ಸಾವಿನಲ್ಲೂ ಒಂದಾದ ತಾಯಿ,ಮಗಳು



ಮೋಳೆ: ಶತಾಯುಷಿ ತಾಯಿ ಗಂಗವ್ವ, ಮಗಳು ಹಣಮವ್ವ ಇಬ್ಬರ ಭಾವಚಿತ್ರಗಳು

ಮೋಳೆ;-ಅಗಲಿದ ತಾಯಿಯ ಕಂಡು ಆಘಾತಕ್ಕೊಳಗಾದ ಮಗಳು ತಾಯಿಯ ಶವದ ಎದುರೇ ಪ್ರಾಣ ಬಿಟ್ಟ ಘಟನೆ ವರದಿಯಾಗಿದೆ. ಅಥಣಿ ತಾಲೂಕಿನ ಪಾರ್ಥನಹಳ್ಳಿ ಗ್ರಾಮದ 76 ವರ್ಷದ ಹಣಮವ್ವಾ ರಾಮು ಮುಜಗೋಣಿ ಸಾವನ್ನಪ್ಪಿದ ದುರ್ದೈವಿ.

**ಘಟನೆಯವಿವರ;**

ಬಾಗಲಕೋಟ ಜಿಲ್ಲೆಯ ಜಮಖಂಡಿ ತಾಲೂಕಿನ ತೊದಲಬಾಗಿ ಗ್ರಾಮದಲ್ಲಿ ವಾಸವಾಗಿರುವ ಶತಾಯುಷಿ, ತಾಯಿ ಗಂಗವ್ವಾ ಚನ್ನಬಸಪ್ಪ ಪಾರ್ಥಹನಳ್ಳಿ(101) ಇವರು ಶುಕ್ರವಾರ ವಯೋಸಹಜ ನಿಧನರಾಗಿದ್ದರು. ತಾಯಿಯ ಸಾವಿನ ಸುದ್ದಿ ತಿಳಿದು ಹಣಮವ್ವಾ ಶುಕ್ರವಾರ ತನ್ನ ಮಕ್ಕಳೊಂದಿಗೆ ಅಂತ್ಯಕ್ರಿಯೆಯಲ್ಲಿ ಪಾಲ್ಗೊಳ್ಳಲು ತೊದಲಬಾಗಿಗೆ ತೆರಳಿದ್ದಳು. ಆದರೆ ಅಲ್ಲಿ ತಾಯಿಯ ಶವ ಕಂಡು ಆಘಾತಕ್ಕೊಳಗಾದ ಹಣಮವ್ವಾ ಕುಸಿದು ಬಿದ್ದು ಆಕೆಯೂ ಸಹ ಯಾಯಿಯೊಂದಿಗೆ ಈಹ ಲೋಕದ ಯಾತ್ರೆ ಮುಗಿಸಿದ್ದಾಳೆ.

ಮೃತ ಹಣುಮವ್ವನನ್ನು ಅಥಣಿ ತಾಲೂಕಿನ ಪಾರ್ಥನಳ್ಳಿ ಗ್ರಾಮಕ್ಕೆ ವಿವಾಹ ಮಾಡಿ ಕೊಟ್ಟಿದ್ದರು. ಅವರಿಗೆ ಮುರು ಜನ ಗಂಡು ಮಕ್ಕಳು ಅಪಾರ ಬಂಧು ಬಳಗ ಬೆಟ್ಟು ಅಗಲಿದ್ದಾರೆ. ಅವರ ಅಂತ್ಯಕ್ರಿಯೇ ಶನಿವಾರ ಬೆಳಿಗ್ಗೆ 9 ಗಂಟೆಗೆ ವೀರಶೈವ ಲಿಂಗಾಯತ ವಿಧಿ ವಿಧನದ ಪ್ರಕಾರ ಅಂತ್ಯಕ್ರಿಯೆ ಜರುಗಿತು.

## ಸೌಲಭ್ಯಗಳ ಸದುಪಯೋಗಕ್ಕೆ ಕರೆ



ನವಲಗುಂದ: 'ವಿದ್ಯಾರ್ಥಿಗಳು ದೊರೆಯುವ ಸೌಲಭ್ಯಗಳನ್ನು ಶಾಲೆಯಲ್ಲಿ ಸರ್ಕಾರದ ವತಿಯಿಂದ ಸದುಪಯೋಗಪಡಿಸಿಕೊಂಡು ಉತ್ತಮ ಶಿಕ್ಷಣ ಪಡೆದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು~ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ವಿ ಡಿ ರಂಗಣ್ಣವರ ಹೇಳಿದರು.

ಅವರು ತಾಲ್ಲೂಕಿನ ಜಾವೂರ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳನ್ನು ವಿತರಿಸಿ ಮಾತನಾಡಿದ ಅವರು ಶಿಕ್ಷಣದಿಂದ ಮಾತ್ರ ವಿದ್ಯಾರ್ಥಿಗಳು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ಸಾಧ್ಯ ಎಂದರು.

ಎಸ್ ಡಿ ಎಂ ಸಿ ಅಧ್ಯಕ್ಷ ಮಂಜುನಾಥ ಹಿರೆಗಣ್ಣವರ ಮಾತನಾಡಿ ಸರ್ಕಾರದ ವತಿಯಿಂದ ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತವಾಗಿ ಪಠ್ಯ ಪುಸ್ತಕ, ಸಮವಸ್ತ್ರ, ಬಿಸಿಯೂಟ ಸೇರಿದಂತೆ ಮತ್ತಿತರ ಸೌಲಭ್ಯಗಳನ್ನು ನೀಡುತ್ತಿದೆ. ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಧಾಖಲು ಮಾಡಿ ಎಂದರು. ಈಶಾಲೆಯ ಶೈಕ್ಷಣಿಕ ಪ್ರಗತಿಗೆ ಶಿಕ್ಷಕರು ಮತ್ತು ಪೋಷಕರ ಸಮನ್ವಯತೆ ಕಾರಣವಾಗಿದೆ ಎಂದರು.

ಶಿಕ್ಷಕರಾದ ಎಸ್ ಎನ್ ಅಕ್ಕಿಮರಡಿ, ಎಂ ಪಿ ಶಿವಪೂಜಿಮಠ, ಸರಿತಾ ಕೊಪ್ಪದ, ಎಂ ಎಂ ನಾಯ್ಕರ ಹಾಗೂ ಶಾಲಾ ವಿದ್ಯಾರ್ಥಿಗಳು ಇದ್ದರು.

# ಮಕ್ಕಳಲ್ಲಿ ಸಂಸ್ಕಾರ ಬೆಳೆಸಿ, ಪ್ರೀತಿಯಿಂದ ಕರ್ತವ್ಯ ನಿರ್ವಹಿಸಿ ಜಿಲ್ಲಾ ಸಮಾಜ ಕಲ್ಯಾಣ ಉಪನಿರ್ದೇಶಕ ಮಹೇಶ್ ಪೊದ್ದಾರ್ ಕರೆ



ಮುದ್ದೇಬಿಹಾಳ: ಪ್ರತಿ ಮನೆಯಲ್ಲೂ ಮನುಷ್ಯರು ಸಿಗುತ್ತಾರೆ, ಆದರೆ ಮನುಷ್ಯತ್ವ ಸಿಗುವುದು ಅಪರೂಪ. ವಸತಿ ನಿಲಯಗಳ ಅಡುಗೆ ಹಾಗೂ ಇತರೆ ಸಿಬ್ಬಂದಿಗಳು ಸಮಯ ಪ್ರಜ್ಞೆ ರೂಢಿಸಿಕೊಂಡು, ಮಕ್ಕಳನ್ನು ಪ್ರೀತಿಯಿಂದ ನೋಡಿಕೊಳ್ಳುವ ಮೂಲಕ ಅವರಲ್ಲಿ ಸಂಸ್ಕಾರ ಬೆಳೆಸುವ ಕೆಲಸ ಮಾಡಬೇಕು ಎಂದು ವಿಜಯಪುರ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ (ಡಿಡಿ) ಮಹೇಶ್ ಪೊದ್ದಾರ್ ಹೇಳಿದರು.

ಪಟ್ಟಣದ ನಗರದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಶನಿವಾರ ಹಮ್ಮಿಕೊಂಡಿದ್ದ 2026–27ನೇ ಸಾಲಿನ ವಿದ್ಯಾರ್ಥಿ ನಿಲಯಗಳ ಪ್ರಾರಂಭೋತ್ಸವ, ನಿಲಯಗಳ ಸಮರ್ಪಕ ನಿರ್ವಹಣೆ ಕುರಿತು ನಿಲಯಪಾಲಕರು ಹಾಗೂ ಗ್ರೂಪ್–ಡಿ ಸಿಬ್ಬಂದಿಗಳ ಪುನಶ್ಚೇತನ ಕಾರ್ಯಾಗಾರ ಮತ್ತು ಕುಂದುಕೊರತೆ ಸಭೆಯಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಜೀವನದಲ್ಲಿ ಉನ್ನತ ಮಟ್ಟಕ್ಕೆ ಬೆಳೆಯಬೇಕಾದರೆ ಅಡುಗೆ ಸಿಬ್ಬಂದಿಗಳ ಸಹಕಾರ ಮತ್ತು ಅವರ ಕೈರುಚಿ ಅತ್ಯಂತ ಮುಖ್ಯ. ವಸತಿ ನಿಲಯದಲ್ಲಿ ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕು. ಯಾವುದೇ ಕೆಲಸ ಮಾಡುವ ಮುನ್ನ ನಮ್ಮನ್ನು ನಾವು ಪ್ರೀತಿಸಬೇಕು, ಆ ಬಳಿಕವಷ್ಟೇ ಇತರರನ್ನು ಪ್ರೀತಿಸಲು ಸಾಧ್ಯ. ಅಡುಗೆ ಸಿಬ್ಬಂದಿ, ರಾತ್ರಿ ಕಾವಲುಗಾರರು ಸೇರಿದಂತೆ ಎಲ್ಲಾ ಸಿಬ್ಬಂದಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕು. ಶೀಘ್ರದಲ್ಲೇ ಅಡುಗೆ ಸಿಬ್ಬಂದಿಗಳಿಗೆ ಗುರುತಿನ ಚೀಟಿ (ಐಡಿ ಕಾರ್ಡ್) ವಿತರಿಸಲಾಗುವುದು. ಸಿಬ್ಬಂದಿಗಳು ಸಮವಸ್ತ್ರ ಧರಿಸಿ ನಿಲಯಕ್ಕೆ ಬರಬೇಕು. ನಿಮ್ಮ ವೇತನದ ಸಮಸ್ಯೆಗಳನ್ನು ಸರ್ಕಾರದ ಸುತ್ತೋಲೆಯ ಪ್ರಕಾರ ಶೀಘ್ರದಲ್ಲೇ ಬಗೆಹರಿಸಲಾಗುವುದು ಎಂದರು.

**ಮಕ್ಕಳನ್ನು ದೇವರೆಂದು ಭಾವಿಸಿ ಕೆಲಸ ಮಾಡಿ:**

ಸಮಾಜ ಕಲ್ಯಾಣ ಇಲಾಖೆಯ ಗ್ರೇಡ್–2 ಸಹಾಯಕ ನಿರ್ದೇಶಕಿ ಬಸಂತಿ ಮಠ ಮಾತನಾಡಿ, "ಪ್ರತಿ ವರ್ಷದಂತೆ ಈ ವರ್ಷವೂ ಸಿಬ್ಬಂದಿ ಎದುರಿಸುತ್ತಿರುವ ಇಎಸ್ಐ ಮತ್ತು ಪಿಎಫ್ ಸಮಸ್ಯೆಗಳನ್ನು ಶೀಘ್ರದಲ್ಲೇ ಸರಿಪಡಿಸಲಾಗುವುದು. ಮಕ್ಕಳಿಗೆ ಪ್ರೀತಿಯಿಂದ ಒಳ್ಳೆಯ ಆಹಾರ ಸಿದ್ಧಪಡಿಸಿ ನೀಡಿದರೆ, ಮಕ್ಕಳಲ್ಲಿ ಸಿಬ್ಬಂದಿಗಳ ಮೇಲಿನ ಗೌರವ ಮತ್ತು ವಿಶ್ವಾಸ ಹೆಚ್ಚುತ್ತದೆ. ಮಕ್ಕಳನ್ನು ದೇವರೆಂದು ಭಾವಿಸಿ ಕೆಲಸ ಮಾಡಿದರೆ ಯಾವುದೇ ಸಮಸ್ಯೆಗಳು ಬರುವುದಿಲ್ಲ" ಎಂದು ತಿಳಿಸಿದರು.

**ಹೊರಗುತ್ತಿಗೆ ನೌಕರರ ವಿವಿಧ ಬೇಡಿಕೆಗಳ ಮನವಿ:**

ಇದೇ ಸಂದರ್ಭದಲ್ಲಿ ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾಧ್ಯಕ್ಷ ಹುಲಗಪ್ಪ ಚಲವಾದಿ ಮಾತನಾಡಿ, ಬಿಸಿಎಂ ವಸತಿ ನಿಲಯಗಳ ಸಿಬ್ಬಂದಿಗೆ ಹೋಲಿಸಿದರೆ ಸಮಾಜ ಕಲ್ಯಾಣ ಇಲಾಖೆಯ ಅಡುಗೆ ಸಿಬ್ಬಂದಿಗಳ ವೇತನ ಕಡಿಮೆ ಇದ್ದು, ಅದನ್ನು ಹೆಚ್ಚಿಸಬೇಕು. ಪ್ರತಿ ತಿಂಗಳ 5ನೇ ತಾರೀಖಿನೊಳಗೆ ವೇತನ ನೀಡಬೇಕು ಮತ್ತು ವೇತನದ ಸ್ಲಿಪ್ ಒದಗಿಸಬೇಕು. ವರ್ಷಕ್ಕೆ ಎರಡು ಸಲ ಇಲಾಖೆ ವತಿಯಿಂದ ಹಾಗೂ ಹೊರಗುತ್ತಿಗೆದಾರರ ಸಭೆ ನಡೆಸಬೇಕು. ಐಡಿ ಕಾರ್ಡ್ ವಿತರಿಸಬೇಕು ಹಾಗೂ ವಾರಕ್ಕೊಂದು ದಿನ ಕಡ್ಡಾಯ ರಜೆ ನೀಡಬೇಕು ಎಂದು ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಇದೇ ವೇಳೆ, ಕನಿಷ್ಠ ವೇತನ ಕಾಯ್ದೆ ಜಾರಿಗೆ ತರಬೇಕು. ಅಡುಗೆ ಸಿಬ್ಬಂದಿಗಳು ವಸತಿ ನಿಲಯದ ಸ್ವಚ್ಛತೆ ಕಾಪಾಡಿ ಅಧಿಕಾರಿಗಳಿಗೆ ಹಾಗೂ ವಾರ್ಡನ್‌ಗಳಿಗೆ ಗೌರವ ನೀಡಬೇಕು ಎಂದರು.

**ಜಿಲ್ಲೆಗೆ ದ್ವಿತೀಯ ಸ್ಥಾನದ ಗರಿ:**

ಇದೇ ಸಂದರ್ಭದಲ್ಲಿ ಮೆಟ್ರಿಕ್ ನಂತರದ ವಸತಿ ನಿಲಯದ ವಿದ್ಯಾರ್ಥಿಗಳು ಜಿಲ್ಲೆಯಲ್ಲೇ ಪ್ರಥಮ ಸ್ಥಾನ ಹಾಗೂ ಮೆಟ್ರಿಕ್ ಪೂರ್ವ ವಸತಿ ನಿಲಯದ ವಿದ್ಯಾರ್ಥಿಗಳು ಜಿಲ್ಲೆಗೆ ದ್ವಿತೀಯ ಸ್ಥಾನ ಪಡೆದುಕೊಂಡ ಸಾಧನೆಯನ್ನು ಸಭೆಯಲ್ಲಿ ಶ್ಲಾಘಿಸಲಾಯಿತು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಮ್ಯಾನೇಜರ್ ಶಿವಲಿಂಗಪ್ಪ ಹಜಡದ, ಎಫ್ ಡಿಸಿ

ಎಸ್ ಕೆ ಲಮಾಣಿ,ವಸತಿ ವಲಯದ ಮೇಲ್ವಿಚಾರಕರಾದ ಸಂಗಮೇಶ ವಾಲಿಕಾರ, ಎಸ್ ಎಮ್ ಕಲಬುರ್ಗಿ, ಎಸ್ ಎಮ್ ಬಾಸಗಿ, ಶ್ರೀಕಾಂತ ಸಲಗರ, ನಾಗರಾಜ ಗುಡಗುಂಟಿ, ಎಸ್ ಎನ್ ಮಲ್ಲಾಡಿ, ಎನ್ ವಿ ಕೋರಿ,ಮಹಾಂತೇಶ ತಾಳಿಕೋಟೆ, ಶ್ರೀಮತಿ ರೇಣುಕಾ ಪಾಟೀಲ,ಸಾವಿತ್ರಿ ಬಿರಾದಾರ, ವಾಣಿ ಹನಗುಂಡ, ಸೇರಿದಂತೆ ತಾಲ್ಲೂಕಿನ ವಿವಿಧ ವಸತಿ ನಿಲಯಗಳ ಅಡುಗೆ ಸಿಬ್ಬಂದಿಗಳು ಹಾಗೂ ಸೇರಿದಂತೆ ಸಮಾಜ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಪ.ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ

ಬಾಗಲಕೋಟೆ: ಎಸ್.ಎಸ್.ಎಲ್.ಸಿ ಹಾಗೂ ಮೆಟ್ರಿಕ್ ನಂತರದ ವಿವಿಧ ಕೋರ್ಸಗಳಲ್ಲಿ ಪ್ರಥಮ ಬಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರು ಮಾಡಲು ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು http://swdservices.karnataka.gov.in/PrizeMoneyClientApp/register ಲಿಂಕ್ ಮೂಲಕ ಅರ್ಜಿ ಸಲ್ಲಿಸಿ ದಾಖಲಾತಿಗಳೊಂದಿಗೆ ಸಂಬಂಧಪಟ್ಟ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೃತರ ಮನೆಗೆ ಅಧಿಕಾರಿಗಳ ದಂಡು; ಒಟ್ಟು 8 ಲಕ್ಷ ರೂ. ಪರಿಹಾರದಲ್ಲಿ ಮೊದಲ ಕಂತು ಪಾವತಿ, ಆಹಾರ ಕಿಟ್ ವಿತರಣೆ



ಮುದ್ದೇಬಿಹಾಳ: ತಾಲ್ಲೂಕಿನ ನಾಗರಬೆಟ್ಟ ಗ್ರಾಮದ ಕಂಪನಿಯೊಂದರಲ್ಲಿ ಇತ್ತೀಚೆಗೆ ಹತ್ಯೆಯಾದ ದಲಿತ ಯುವಕ ರವಿಚಂದ್ರ ಮಾದರ ಅವರ ಕುಟುಂಬಕ್ಕೆ ಇಡೀ ಜಿಲ್ಲಾಡಳಿತವೇ ಸ್ಪಂದಿಸಿದೆ. ಶನಿವಾರ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಮೃತರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಿದ್ದಲ್ಲದೆ, ಕಾನೂನುಬದ್ಧ ಪರಿಹಾರ ಧನ ವಿತರಿಸಿದ್ದಾರೆ.

ಸರ್ಕಾರದಿಂದ ಮಂಜೂರಾದ ಒಟ್ಟು 8 ಲಕ್ಷ ರೂಪಾಯಿಗಳ ಪರಿಹಾರದ ಪೈಕಿ, ಮೊದಲ ಕಂತಾಗಿ ಸುಮಾರು 4.12 ಲಕ್ಷ ರೂ.ಗಳ ಪರಿಹಾರದ ಚೆಕ್ ಅನ್ನು ಅಧಿಕಾರಿಗಳು ಕುಟುಂಬಸ್ಥರಿಗೆ ಹಸ್ತಾಂತರಿಸಿದರು. ಇದೇ ಸಂದರ್ಭದಲ್ಲಿ ಸ್ಥಳೀಯ ಗ್ರಾಮ ಪಂಚಾಯಿತಿ ವತಿಯಿಂದ ಉಚಿತ ಆಹಾರ ಧಾನ್ಯಗಳ ಕಿಟ್ ಅನ್ನು ಸಹ ವಿತರಿಸಲಾಯಿತು.

**ಅಧಿಕಾರಿಗಳ ಭೇಟಿ ಮತ್ತು ಸಾಂತ್ವನ:** ಪರಿಹಾರ ವಿತರಣೆಯ ವೇಳೆ ಅಪರ ಜಿಲ್ಲಾಧಿಕಾರಿಗಳಾದ ಡಾ. ಔದ್ರಾಮ್, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಮಹೇಶ ಪೋತದಾರ್, ಬೆಳಗಾವಿ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಾಥ್ ಜೋಶಿ, ಡಿವೈಎಸ್ಪಿ ಸಂದೀಪಸಿಂಗ್ ಮುರಗೂಡ, ಪಿಎಸ್ಐ ಸಂಜಯ್ ತಿಪ್ಪಾರಡ್ಡಿ ಅವರು ಭೇಟಿ ನೀಡಿ ಕುಟುಂಬಕ್ಕೆ ಧೈರ್ಯ ತುಂಬಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯವಸ್ಥಾಪಕ ಎಸ್.ಎಂ. ಪಾಟೀಲ, ನೋಡಲ್ ಅಧಿಕಾರಿ ಬಿ.ಎಸ್. ನಾಟೀಕರ್, ತಾ.ಪಂ ಇಓ ಸಂಗನಗೌಡ ಬಿರಾದಾರ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ಬಸಂತಿ ಮಠ, ಎಚ್.ಎಂ. ಹೆಬ್ಬಲಿ, ಕಂದಾಯ ನಿರೀಕ್ಷಕ ವಿ.ವಿ. ಅಂಬಿಗೇರ, ತಾ.ಪಂ ವ್ಯವಸ್ಥಾಪಕ ವೀರೇಶ ಹೂಗಾರ ಹಾಗೂ ಗ್ರಾಮಾಢಳಿತಾಧಿಕಾರಿ ಶಿವಶರಣ ಕುಂಬಾರ,

ಜಿಲ್ಲಾ ದೌರ್ಜನ್ಯ ತಡೆ ಸಮಿತಿ ಸದಸ್ಯ ಮಲು ತಳವಾರ ಹಾಗೂ ದಲಿತ ಮುಖಂಡರಾದ ಹರೀಶ್ ನಾಟಿಕಾರ,ಸಿ.ಜಿ. ವಿಜಯಪುರ, ತಿಪ್ಪಣ್ಣ ದೊಡ್ಡಮನಿ, ಪ್ರಕಾಶ್ ಚಲವಾದಿ, ವಾಯ್.ಎಸ್. ಚಲವಾದಿ, ಬಹದ್ದೂರ್ ರಾಠೋಡ, ಯಲ್ಲಪ್ಪ ಚಲವಾದಿ,ಹುಲಗಪ್ಪ ಮಾದರ ಸೇರಿದಂತೆ ಸ್ಥಳೀಯ ದಲಿತ ಮುಖಂಡರು ಮತ್ತು ಗ್ರಾಮಸ್ಥರು ಹಾಜರಿದ್ದರು.

# ತಜ್ಞವೈದ್ಯ, ವೈದ್ಯಾಧಿಕಾರಿಗಳ ನೇಮಕಕ್ಕೆ ಅರ್ಜಿ

ಬಾಗಲಕೋಟೆ: ಬಾಗಲಕೋಟೆ ಜಿಲ್ಲೆಯ ತಾಲೂಕಾ ಆಸ್ಪತ್ರೆಗಳು, ತಜ್ಞ ವೈದ್ಯಕರು & ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಜ್ಞ ವೈದ್ಯರು & ಹಿರಿಯ ವೈದ್ಯಾಧಿಕಾರಿಗಳ, ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇರುವ ಹುದ್ದೆಗೆ ಗುತ್ತಿದೆ ಆಧಾರದ ಮೇಲೆ ನೇಮಕಾತಿಗಾಗಿ ಪ್ರತಿ ದಿನ ನೇರ ಸಂದರ್ಶನಕ್ಕೆ ಹಾಜರಾಗಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಬೂದಗುಂಪದಲ್ಲಿ ಅಕ್ರಮ ಮದ್ಯ ಮಾರಾಟ
## ದೇವಸ್ಥಾನ, ಮಸೀದಿ, ಗ್ರಂಥಾಲಯದ ಮುಂದೆಯೇ ಮಾರಾಟ: ಕರವೇ ಆಕ್ರೋಶ

**ಕೊಪ್ಪಳ** : ತಾಲೂಕಿನ ಬೂದಗುಂಪ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟದ ಹಾವಳಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಗ್ರಾಮಸ್ಥರ ಆತಂಕಕ್ಕೆ ಕಾರಣವಾಗಿದೆ.

ಗ್ರಾಮದ ಪ್ರಮುಖ ಕೇಂದ್ರಗಳಾದ ದೇವಸ್ಥಾನ, ಮಸೀದಿ ಹಾಗೂ ಸಾರ್ವಜನಿಕ ಗ್ರಂಥಾಲಯದ ಸುತ್ತಮುತ್ತಲೇ ರಾಜಾರೋಷವಾಗಿ ಅಕ್ರಮ ಮದ್ಯ ಮಾರಾಟ ನಡೆಯುತ್ತಿದೆ ಎಂಬ ಆರೋಪಗಳು ಕೇಳಿಬಂದಿವೆ.

ಗ್ರಾಮದ ಪ್ರಮುಖ ವೃತ್ತದಲ್ಲಿರುವ ಶಿವನ ದೇವಸ್ಥಾನ, ಮಸೀದಿ, ಸಾರ್ವಜನಿಕ ಗ್ರಂಥಾಲಯದ ಮುಂಭಾಗ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಕ್ರಮ ಮದ್ಯದ ಅಡ್ಡೆಗಳು ತಲೆಎತ್ತಿರುವುದರಿಂದ ಭಕ್ತರು, ವಿದ್ಯಾರ್ಥಿಗಳು ಮತ್ತು ಸಾರ್ವ ಜನಿಕರು ತೊಂದರೆ ಅನುಭವಿ ಸುವಂತಾ ಗಿದೆ ಎಂದು ಸ್ಥಳೀಯರು ದೂರಿದ್ದಾರೆ.

ವಿಶೇಷವಾಗಿ ಬೆಳಿಗ್ಗೆ ಮತ್ತು ಸಂಜೆ ವೇಳೆಯಲ್ಲಿ ಮದ್ಯಪಾನಿಗಳ ಓಡಾಟ ಹೆಚ್ಚಾಗಿದ್ದು, ಸಾರ್ವಜನಿಕರ ನೆಮ್ಮದಿ ಹಾಳಾಗಿದೆ. ಮಹಿಳೆಯರು ಹಾಗೂ ವಿದ್ಯಾರ್ಥಿನಿಯರು ಈ ಪರಿಸ್ಥಿತಿಯಿಂದ ಭಯಭೀತರಾಗಿದ್ದು, ದೇವಸ್ಥಾನ ಹಾಗೂ ಗ್ರಂಥಾಲಯಕ್ಕೆ ತೆರಳಲು ಹಿಂಜರಿಯುವಂತಾಗಿದೆ.



ಮದ್ಯದ ಅಮಲಿನಲ್ಲಿರುವ ಕೆಲವರು ಅಸಭ್ಯವಾಗಿ ವರ್ತಿಸುವುದು ಹಾಗೂ ಸಾರ್ವಜನಿಕರಿಗೆ ಕಿರಿಕಿರಿ ಉಂಟುಮಾಡುತ್ತಿರುವುದರಿಂದ ಗ್ರಾಮದಲ್ಲಿ ಅಸುರಕ್ಷಿತ ವಾತಾವರಣ ನಿರ್ಮಾಣವಾಗಿದೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಸ್ಥಳೀಯರ ಪ್ರಕಾರ, ಪಾನ್ ಶಾಪ್ ಹೆಸರಿನಲ್ಲಿ ಅಕ್ರಮ ಮದ್ಯ ಮಾರಾಟ ನಡೆಯುತ್ತಿದ್ದು, ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ. ಈ ಕುರಿತು ಪ್ರಶ್ನಿಸಿದವರಿಗೆ ಬೆದರಿಕೆ ಹಾಕಲಾಗುತ್ತಿದೆ ಎಂಬ ಆರೋಪಗಳೂ ಕೇಳಿಬಂದಿವೆ.

ಇಷ್ಟೆಲ್ಲ ಬೆಳವಣಿಗೆಗಳು ಗ್ರಾಮದ ಹೃದಯಭಾಗದಲ್ಲೇ ನಡೆಯುತ್ತಿದ್ದರೂ ಅಬಕಾರಿ ಇಲಾಖೆ ಹಾಗೂ ಪೊಲೀಸ್ ಇಲಾಖೆ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ ಎಂಬ ಅಸಮಾಧಾನ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗಿದೆ. ಅಕ್ರಮ ಚಟುವಟಿಕೆಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.


ಈ ನಡುವೆ ಕರ್ನಾಟಕ ರಕ್ಷಣಾ ವೇದಿಕೆ (ನಾರಾಯಣಗೌಡ ಬಣ) ಅಕ್ರಮ ಮದ್ಯ ಮಾರಾಟವನ್ನು ತೀವ್ರವಾಗಿ ಖಂಡಿಸಿ ಜಿಲ್ಲಾ ಅಧ್ಯಕ್ಷ ಗಿರೀಶಾನಂದ ಮಾತನಾಡಿ ಪವಿತ್ರ ಧಾರ್ಮಿಕ ಕೇಂದ್ರಗಳು ಹಾಗೂ ಗ್ರಂಥಾಲಯದಂತಹ ಸಾರ್ವಜನಿಕ ಸ್ಥಳಗಳ ಸಮೀಪ ಅಕ್ರಮ ಮದ್ಯ ಮಾರಾಟ ನಡೆಯುತ್ತಿರುವುದು ಖಂಡನೀಯ. ಕೂಡಲೇ ಸಂಬಂಧಪಟ್ಟ ಇಲಾಖೆಗಳು ಕ್ರಮ ಕೈಗೊಳ್ಳದಿದ್ದರೆ ಅಬಕಾರಿ ಇಲಾಖೆಯ ತಾಲೂಕು ಕಚೇರಿ ಮತ್ತು ಮುನಿರಾಬಾದ್ ಪೊಲೀಸ್ ಠಾಣೆ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಗ್ರಾಮದ ಶಾಂತಿ, ಸುವ್ಯವಸ್ಥೆ ಹಾಗೂ ಸಾರ್ವಜನಿಕರ ಸುರಕ್ಷತೆಯನ್ನು ಕಾಪಾಡುವ ನಿಟ್ಟಿನಲ್ಲಿ ಜಿಲ್ಲಾಡಳಿತ ಮತ್ತು ಸಂಬಂಧಿತ ಇಲಾಖೆಗಳು ತ್ವರಿತ ಕ್ರಮ ಕೈಗೊಳ್ಳಬೇಕು ಎಂಬುದು ಗ್ರಾಮಸ್ಥರ ಆಗ್ರಹವಾಗಿದೆ.

# ವಸತಿ ನಿರಾಶ್ರಿತರಿಗೆ ವಸತಿ ಕಲ್ಪಿಸದಿದ್ದರೇ ಉಗ್ರ ಪ್ರತಿಭಟನೆ ಎಚ್ಚರಿಕೆ : ಸಂಜಯ್ ದಾಸ್ ಕೌಜಗೇರಿ

**ಕೊಪ್ಪಳ** : ನಗರದ 3ನೇ ವಾರ್ಡ್ ಕುವೆಂಪು ನಗರದಲ್ಲಿರುವ ಆಶ್ರಯ ನಿವೇಶನ ಹಾಗೂ ಗುನಳ್ಳಿ, ಹೊರತಟ್ನಾಳ ಆಶ್ರಯ ನಿವೇಶನ ಫಲಾನುಭವಿಗಳಿಗೆ ಕೊಪ್ಪಳ ಆಶ್ರಯ ಕಮಿಟಿಯಲ್ಲಿ ನಿವೇಶನ ಆಯ್ಕೆ ಪಟ್ಟಿಯಲ್ಲಿ ಆಯ್ಕೆಗೊಂಡು ಅನುಮೋದನೆಗೊಂಡು ಎಲ್ಲಾ ದಾಖಲಾತಿಗಳು ಪೂರ್ಣಗೊಂಡಿದ್ದರು. ಇದುವರೆಗೆ ಹಂಚಿಕೆ ಮತ್ತು ಹಕ್ಕು ಪತ್ರ ಸಿಗುತ್ತಿಲ್ಲಾ, ಸರಕಾರದ ಆಶ್ರಯ ಯೋಜನೆಯಡಿ ನಿವೇಶನ ಮಂಜೂರಾಗಿದ್ದರು ಇಲ್ಲಿಯ ವರೆಗೆ ಹಕ್ಕು ಪತ್ರ ವಿತರಣೆಯಾಗಿಲ್ಲಾ, ಜಾಗ ಮಂಜೂರಾಗಿದ್ದರು ಅಧಿಕಾರಿಗಳ ನಿರ್ಲಕ್ಷ್ಯದಿಂದ ಬಡ ಕುಟುಂಬಗಳು ಸಂಕಷ್ಟ ಜೀವನ ನಡೆಸುವಂತಾಗಿದ್ದು ಕೂಡಲೇ ನಮ್ಮ ಬೇಡಿಕೆ ಈಡೇರದಿದ್ದರೇ ಮುಂದಿನ ದಿನಗಳಲ್ಲಿ ಉಗ್ರ ಪ್ರತಿಭಟನೆ ಮಾಡಲಾಗುವುದು ಎಂದು ಅಲೆಮಾರಿ ಸಮುದಾಯದ ಮುಖಂಡ ಹಾಗೂ ಸಮಾಜ ಸೇವಕ ಸಂಜಯ್ ದಾಸ್ ಕೌಜಗೇರಿ ಎಚ್ಚರಿಸಿದರು.

ಅವರು ಶನಿವಾರದಂದು ನಗರದ 3ನೇ ವಾರ್ಡ್ ಕುವೆಂಪು ನಗರದಲ್ಲಿ ವಸತಿ ನಿರಾಶ್ರಿತ ಹೋರಾಟ ಸಮಿತಿ ವತಿಯಿಂದ ಹಮ್ಮಿಕೊಂಡ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹದಲ್ಲಿ ಪಾಲ್ಗೊಂಡು ಮಾತನಾಡಿ ವಾರ್ಡ್ ನಲ್ಲಿ ಎಸ್. ಸಿ, ಎಸ್. ಟಿ, ಒಬಿಸಿ, ಅಲ್ಪಸಂಖ್ಯಾತ ಹಾಗೂ ಆಲೆಮಾರಿ ಸಮುದಾಯಗಳಿಗೆ ಸೇರಿದ ಅನೇಕ ಫಲಾನುಭವಿಗಳು 30ವರ್ಷಗಳಿಂದ ಸ್ವಂತ ಮನೆ ಮತ್ತು ಶಾಶ್ವತ ನೆಲೆ ಇಲ್ಲದೇ




ಬದುಕುತ್ತಿದ್ದಾರೆ ಎಂದರು.

ಮಳೆ, ಬಿಸಿಲು, ಗಾಳಿ ನಡುವೆ ಸುರಕ್ಷಿತ ಆಶ್ರಯವಿಲ್ಲದೇ ಇಲ್ಲಿನ ಜನ ಜೀವನ ಸಾಗಿಸುತ್ತಿದ್ದು, ಸರಕಾರದ ಭರವಸೆ ಇನ್ನೂ ಈಡೇರುತ್ತಿಲ್ಲಾ ಎಂದು ಆಕ್ರೋಶ ವ್ಯಕ್ತ ಪಡಿಸಿದರು. ಇಲ್ಲಿನ ನಿವಾಸಿಗಳ ನ್ಯಾಯ ಸಮ್ಮತ ಬೇಡಿಕೆಗಳನ್ನು ಈಡೇರಿಸದಿದ್ದರೇ ನಮ್ಮ ಪ್ರತಿಭಟನೆ ಉಗ್ರ ರೂಪ ಪಡೆದು ಮುಂದೆ ಆಗುವ ಅನಾಹುತಗಳಿಗೆ ಅಧಿಕಾ ರಿಗಳು, ಜನ ಪ್ರತಿನಿಧಿಗಳೇ ಹೊಣೆ ಗಾರರಾ ಗುತ್ತಾರೆ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ವಾರ್ಡ್ ನಿವಾಸಿಗಳಾದ ಹನಮೇಶ, ರಾಜಪ್ಪ, ದುರಗಪ್ಪ ಕಲ್ಯಾಣಿ, ಶ್ರೀನಿವಾಸ, ವಿರುಪಾಕ್ಷ, ಬುಡ್ನ ಸಾಬ, ಮಂಜುನಾಥ, ಯಲ್ಲಮ್ಮ, ದೇವಮ್ಮ, ಗೋವಿಂದಮ್ಮ, ರಾಧಾ, ಹಸಿನಾಬೇಗಂ, ಮಂಜುಳಾ ಸೇರಿದಂತೆ ಇತರರು ಇದ್ದರು.

**ಬೇಡಿಕೆಗಳು:**

ಆಶ್ರಯ ನೀವೇಶನಗಳಿಗೆ ತಕ್ಷಣ ಹಕ್ಕು ಪತ್ರ ವಿತರಿಸಬೇಕು, ಈಗಾಗಲೇ ಆಯ್ಕೆಯಾದ ಎಲ್ಲಾ ಫಲಾನುಭವಿಗಳಿಗೆ ಶಾಶ್ವತ ದಾಖಲೆಗಳನ್ನು ನೀಡಬೇಕು, ಎಸ್.ಸಿ, ಎಸ್.ಟಿ, ಒಬಿಸಿ, ಅಲ್ಪ ಸಂಖ್ಯಾತ ಹಾಗೂ ಅಲೆಮಾರಿ ಸಮುದಾಯದ ಬಡ ಕುಟುಂಬಗಳಿಗೆ ಆದ್ಯತೆ ನೀಡಬೇಕು, 30ವರ್ಷಗಳಿಂದ ಮನೆ ರಹಿತ ಜೀವನ ನಡೆಸುತ್ತಿರುವ ಕುಟುಂಬಗಳಿಗೆ ತಕ್ಷಣ ನ್ಯಾಯ ಒದಗಿಸಬೇಕು.

ಕುವೆಂಪು ನಗರದ ಆಶ್ರಯ ಸಮಸ್ಯೆಯನ್ನು ಜಿಲ್ಲಾಡಳಿತ ತುರ್ತಾಗಿ ಪರಿಶೀಲಿಸಿ ಪರಿಹರಿಸಿ ಬಡ ಜನತೆ ನೆರವಾಗಬೇಕು.

**ಸಂಜಯ್ ದಾಸ್ ಕೌಜಗೇರಿ**
**ಅಲೆಮಾರಿ ಸಮುದಾಯದ ಮುಖಂಡ ಹಾಗೂ ಸಮಾಜ ಸೇವಕ.**

# ಸಾರ್ವಜನಿಕ ಮೈದಾನದಲ್ಲಿ ಐಪಿಎಲ್ ಕ್ರಿಕೆಟ್ ಹಬ್ಬ




**ಕೊಪ್ಪಳ:** ನಗರದ ಸಾರ್ವಜನಿಕ ಮೈದಾನದಲ್ಲಿ ಕೊಪ್ಪಳ ಜಿಲ್ಲಾ ಅಥ್ಲೆಟಿಕ್ ಅಸೋಸಿಯೇಷನ್ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದೊಂದಿಗೆ ಸಂಸದ ಕೆ ರಾಜಶೇಖರ್ ಹಿಟಾಳ್ ಅವರ ಸಾರಥ್ಯದಲ್ಲಿ ಎರಡನೇ ಬಾರಿಗೆ ಐಪಿಎಲ್ 19ರ ಆರ್‌ಸಿಬಿ ಮತ್ತು ಜಿಟಿ ನಡುವೆ ನಡೆಯಲಿರುವ ಐಪಿಎಲ್ ಅಂತಿಮ ಪಂದ್ಯವನ್ನು ವೀಕ್ಷಿಸಲು ಬೃಹತ್ ಎಲ್‌ಇಡಿ ಪರದೆ ಗೂಸ್ ಬಂ ಸೌಂಡ್ ಸಿಸ್ಟಮ್ ಮೂಲಕ ತೋರಿಸುವ ಕಾರ್ಯಕ್ರಮವನ್ನು ಮೇ 31ರಂದು ಸಂಜೆ 5.00 ಗಂಟೆಯಿಂದ ಹಮ್ಮಿಕೊಳ್ಳಲಾಗಿದೆ.

14*30 ಹಾಗೂ 10*16 ಎರಡು ಪರದೆ ಹಾಕಲಾಗುತ್ತದೆ ಜೊತೆಗೆ ಸುಮಾರು ಐಸು ಸಾವಿರ ಜನರಿಗೆ ಆಸನ ವ್ಯವಸ್ಥೆ ಮಾಡಲಾಗಿದೆ. ಸಾರ್ವಜನಿಕರಿಗೆ ಉಚಿತ ಪ್ರವೇಶ ಕಲ್ಪಿಸಲಾಗಿದ್ದು ಪುರುಷರಿಗೆ ಮತ್ತು ಮಹಿಳೆಯರಿಗೆ ಪ್ರತ್ಯೇಕ ಆಸನ ಮೀಸಲು ಇಡಲಾಗಿದೆ.

ಪೊಲೀಸ್ ಹಾಗೂ ಸಿಸಿಟಿವಿ ಕಣ್ಗಾವಲಿನಲ್ಲಿ ಪಂದ್ಯಾಟದ ವೀಕ್ಷಣೆ ನಡೆಯಲಿದೆ, ಕಳೆದ ಬಾರಿ ಇದೇ ರೀತಿ ವ್ಯವಸ್ಥೆ ಮಾಡಲಾಗಿತ್ತು ಹಾಗೂ ಅದರ ಯಶಸ್ಸಿನ ಕಾರಣ ಮತ್ತೊಮ್ಮೆ ಫೈನಲ್ ಗೆ ಪ್ರವೇಶ ಪಡೆದ ಆರ್‌ಸಿಬಿ ಗೆಲುವು ಸಾಧಿಸಲಿ ಎಂದು ಕ್ರಿಕೆಟ್ ಪ್ರೇಮಿಗಳು ಹಂಬಲಿಸುತ್ತಿದ್ದಾರೆ.

# ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ಸಹಾಯಧನ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಧಾರವಾಡ : 2026–27 ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಸಾಮಾನ್ಯ ವರ್ಗದ ರೈತರಿಂದ ಹೊಸ ಪ್ರದೇಶ ವಿಸ್ತರಣೆಯಡಿ (ಮಾವು, ಬಾಳೆ, ಪಪ್ಪಾಯ, ಕರಿಮೆಣಸು, ಹಾಗೂ ಗೊಡಂಬಿ), ಹೂ ಬೆಳೆ ಪ್ರದೇಶ ವಿಸ್ತರಣೆಯಡಿ (ಸುಗಂಧ ರಾಜ, ಸೇವಂತಿಗೆ, ಹಾಗೂ ಚೆಂಡೂ ಹೂ ಬೆಳೆಗೆ), ತರಕಾರಿ ಬೆಳೆಗಳ ಪ್ರದೇಶ ವಿಸ್ತರಣೆ, ಮಾವು ಪುನಶ್ಚೇತನ, ಟ್ರ್ಯಾಕ್ಟರ್ (20 ಪಿಟಿಓ, ಎಚ್‌ಪಿ), ವಯಕ್ತಿಕ ನೀರು ಸಂಗ್ರಹಣ ಘಟಕ, ಪ್ಲಾಸ್ಟಿಕ್ ಮಲ್ಚಿಂಗ್, ತಳ್ಳುವಗಾಡಿ ಮತ್ತು ಇತ್ಯಾದಿ ಘಟಕಗಳಿಗೆ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ರೈತರು ಜೂನ್ 10. 2026 ರೊಳಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಕಲಘಟಗಿ ಕಛೇರಿಗೆ ಅರ್ಜಿಯನ್ನು ಸಲ್ಲಿಸಬೇಕು.

ಮೊದಲು ಬಂದ ರೈತರಿಗೆ ಆದ್ಯತೆ ಮೇರೆಗೆ ಜೇಷ್ಟತೆ ಅನುಸಾರವಾಗಿ ಸಹಾಯಧನಕ್ಕೆ ಪರಿಗಣಿಸಲಾಗುವುದು. ರೈತರು ಸದರಿ ಯೋಜನೆಯ ಪ್ರಯೋಜನ ಪಡೆದುಕೊಳ್ಳಬೇಕೆಂದು ಕಲಘಟಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಠದಿಂದ ಅನಾಥ ಮಕ್ಕಳಿಗೆ ಉಚಿತ ಶಿಕ್ಷಣ-ವಿವಾಹದ ಸಂಕಲ್ಪ



ತಾಳಿಕೋಟೆ: ಧರ್ಮದ ಕಾರ್ಯಕ್ಕಾಗಿ ಸದಾಮುಂದೆ ಎಂಬ ಕಾಯಕಲ್ಪದೊಂದಿಗೆ ಸಾಗಿರುವ ಚಬನೂರಿನ ಜ್ಯೋತಿಷ್ಯ ರತ್ನ ಶ್ರೀರಾಮಲಿಂಗಯ್ಯ ಮಹಾಸ್ವಾಮಿಗಳು ತಿಂಗಳ ರ್‍ಯಂತ ವೈದಿಕ ಸಂಸ್ಕಾರ ಶಿಬಿರ ನಡೆಸುವದರ ಮೂಲಕ ಮಕ್ಕಳ ಜೀವನದಲ್ಲಿ ಬದಲಾವಣೆ ತರುವಂತಹ ಮತ್ತು ಸಂಸ್ಕಾರಯುತ ಬಧುಕನ್ನು ರೂಪಿಸುವಂತಹ ಕಾರ್ಯ ಮಾಡಿರುವದು ಶ್ಲಾಘನೀಯವಾಗಿದೆ ಎಂದು ಕೊಡೇಕಲ್ಲ ದುರದುಂಡೇಶ್ವರ ಮಠದ ಶ್ರೀ ಶಿವಕುಮಾರ ಮಹಾಸ್ವಾಮಿಗಳು ನುಡಿದರು.

ಶನಿವಾರರಂದು ತಾಲೂಕಿನ ಚಬನೂರ ಗ್ರಾಮದ ಪ್ರತಿಷ್ಠಿತ ದಾಸೋಹ ಮಠವಾಗಿರುವ ಸಿದ್ದಿ ಪುರುಷ ಶ್ರೀ ರಾಮಲಿಂಗೇಶ್ವರ ಮಠದಲ್ಲಿ ಮೇ.1 ರಿಂದ 30 ರವರೆಗೆ ಒಂದು ತಿಂಗಳ ರ್‍ಯಂತ ಸಾಗಿಬಂದ ಸಿದ್ದಿ ಪುರುಷ ಶ್ರೀ ರಾಮಲಿಂಗೇಶ್ವರ ವೈದಿಕ ಸಂಸ್ಕಾರ ಶಿಬಿರದ ಸಮಾರೋಪ ಸಮಾರಂಭದಲ್ಲಿ ದಿವ್ಯ ಸಾನಿದ್ಯ ವಹಿಸಿ ಮಾತನಾಡುತ್ತಿದ್ದ ಅವರು ಇಂದಿನ ದಿನಮಾನದಲ್ಲಿ ಪ್ರಾಣಿ, ಪಕ್ಷ ಸಂಕುಲಗಳೆಲ್ಲವೂ ಧರ್ಮವನ್ನು ಬಿಡದೇ ತಮ್ಮ ಬಳಗದೊಂದಿಗೆ ಸಾಗುತ್ತಿವೆ ಆದರೆ ಮನುಷ್ಯ ಜನ್ಮ ಧರ್ಮವನ್ನು ಬಿಟ್ಟು ಪಾಶ್ಚಿಮಾತ್ಯ ಸಂಸ್ಕೃತಿಯ ಕಡೆಗೆ ವಾಲುತ್ತಾ ಸಾಗಿರುವದು ಅಘಾತಕಾರಿ ಸಂಗತಿಯಾಗಿದೆ ಹೀಗಾಗಿ ಮನುಷ್ಯ ಜನ್ಮವನ್ನು ಚಿಕ್ಕಂದಿದ್ದಲೇ ಸರಿದಾರಿಯಲ್ಲಿ ನಡೆಸಬೇಕೆಂಬ ಸಂಸ್ಕಲ್ಪದೊಂದಿಗೆ ಕಾಶಿ ಮತ್ತು ಶ್ರೀಶೈಲ ವೇದ ಪಂಡಿತರನ್ನು ಕರೆಯಿಸಿ ಮಕ್ಕಳಿಗೆ ವೈದಿಕ ಸಂಸ್ಕಾರ ಶಿಬಿರದ ಮೂಲಕ ವೇದ ಉಪನಿಷತ್ತು ಇಷ್ಟಲಿಂಗ ಪೂಜೆ, ಶಿವಯೋಗ ಸಾಧನೆ ಮತ್ತು ಪೂಜಾ ವಿಧಿವಿಧಾನಗಳು ವೈದಿಕ ಸಂಸ್ಕಾರ, ಧಾರ್ಮಿಕ ಆಚರಣೆಗಳು ಮತ್ತು ವೇದ, ಪಠಣ, ಯೋಗ, ಒಳಗೊಂಡು ಮಕ್ಕಳ ವ್ಯಕ್ತಿತ್ವ ವಿಕಸನಕ್ಕೆ ಮತ್ತು ಧಾರ್ಮಿಕ ಹಿನ್ನೆಲೆಯನ್ನು ಬಲಪಡಿಸಲು ನಮ್ಮ ಭಾರತ ದೇಶದ ಸಂಸ್ಕಾರವನ್ನು ಬಿತ್ತುವಂತಹ ಕಾರ್ಯ ಮಾಡಿದ ಶ್ರೀಮಠದ ಧರ್ಮಾಧಿಕಾರಿ ಶ್ರೀ ರಾಮಲಿಂಗಯ್ಯ ಸ್ವಾಮಿಗಳ ಕಾರ್ಯ ಜಿಲ್ಲೆಯಲ್ಲಿಯೇ ಮಾದರಿಯಾಗಿದೆ ಎಂದ ಅವರು

ಇನ್ನೋರ್ವ ಸಾಸನೂರ-ತುಂಬಗಿ ಹಿರೇಮಠದ ಶ್ರೀ ಮಹಾಂತಲಿಂಗ ಮಹಾಸ್ವಾಮಿಗಳು ಮಾತನಾಡಿ ಇಷ್ಟಲಿಂಗ ನಿಷ್ಠೆ ಹೊಂದಲು ಶರಣರ ದಿವ್ಯ ಬದುಕು ಮತ್ತು ವಚನ ಸಾಹಿತ್ಯ ಅರಿಯುವುದು ಅವಶ್ಯವಾಗಿದೆ. ಇಷ್ಟಲಿಂಗ ಜನಕ ಬಸವಣ್ಣನವರಲ್ಲಿ ಅಚಲ ಶ್ರದ್ಧೆ ಇರಬೇಕಾಗಿದೆ. ಹಾಗೇ ನಂಬಿ ಅಪ್ಪಿಕೊಂಡು, ಒಪ್ಪಿಕೊಂಡು ನಡೆದು ಬಂದ ಸಿದ್ದಿಪುರುಷ ಶ್ರೀರಾಮಲಿಂಗೇಶ್ವರರು ನಮಗೆ ದಾರಿದೀಪವಾಗಿದ್ದಾರೆ ವೈದಿಕ ಸಂಸ್ಕಾರ ಶಿಬಿರಗಳು ಸಾಮಾನ್ಯವಾಗಿ ಮಕ್ಕಳಲ್ಲಿ ಸಂಸ್ಕಾರ, ಸಂಸ್ಕೃತಿ ಮತ್ತು ಧಾರ್ಮಿಕ ಮೌಲ್ಯಗಳನ್ನು ಬೆಳೆಸುವ ಬೇಸಿಗೆ ಶಿಬಿರಗಳಾಗಿವೆ ಈ ಶಿಬಿರದಿಂದ ಮೌಲ್ಯಯುತವಾದ ಬಧುಕು ರೂಪಿಸಿಕೊಳ್ಳಲು ಸಾದ್ಯವಾಗಿದೆ ಶ್ರೀಮಠದ ಉದ್ಘಾಟನೆಯ ಸಮಯದಲ್ಲಿ ಘೋಷಿಸಿದಂತೆ ವೈದಿಕ ಸಂಸ್ಕಾರ ಶಿಬಿರವನ್ನು ಯಶಸ್ವಿಯಾಗಿ ನಡೆಸಿ ಧರ್ಮದ ಕೆಲಸವನ್ನು ಯಶಸ್ವಿಯಾಗಿ ಮುಗಿಸಿದ ಶ್ರೀರಾಮಲಿಂಗಶ್ರೀಗಳಿಗೆ ಅಭಿನಂದಿಸಿದರು.

ಇನ್ನೋರ್ವ ದೇವರಹಿಪ್ಪರಗಿ ಪರದೇಶಿ ಮಠದ ಶ್ರೀ ಶಿವಯೋಗಿ ಮಹಾಸ್ವಾಮಿಗಳು ಮಾತನಾಡಿ ಮಕ್ಕಳಿಗೆ ಶಿಕ್ಷಣವು ಎಷ್ಟು ಮುಖ್ಯವೋ ಅದಕ್ಕಿಂತ ಹೆಚ್ಚು ಸಂಸ್ಕಾರವೆಂಬುದು ಮುಖ್ಯವಾಗಿದೆ ಶಿಕ್ಷಣ ಸಾಧನೆ ಮತ್ತು ಹಣಗಳಿಕೆಗೆ ಪುಷ್ಠಿನೀಡಿದರೆ ಸಂಸ್ಕಾರವು ಜೀವನದ ಬಧುಕಿನ ದಾರಿಯನ್ನು ಕಲಿಸುತ್ತದೆ ಸಂಸ್ಕಾರವಿಲ್ಲದ ಬಧುಕಿನಿಂದ ತಂದೆ ತಾಯಿಯೊಬ್ಬರು ಮಗನ ಹತ್ತಿರ ಸಾಕಷ್ಟು ಹಣ ಅಂತಸ್ಥು ಎಲ್ಲವೂ ಇದ್ದರೂ ವೃದ್ದಾಶ್ರಮಯದಲ್ಲಿ ಕಾಲಕಳೆಯುತ್ತಿರುವದರ ಬಗ್ಗೆ ಕಥೆಯೊಂದನ್ನು ವಿವರಿಸಿದ ಅವರು ವೇದ ಉಪನಿಷತ್ತುಗಳನ್ನೊಳಗೊಂಡ ವೈದಿಕ ಸಂಸ್ಕಾರ ಶಿಬಿರವನ್ನು ನಡೆಸಿ ಈಭಾಗದಲ್ಲಿ ಮಾದರಿಯಾದ ಚಬನೂರಮಠದ ಧರ್ಮಾಧಿಕಾರಿ ಶ್ರೀರಾಮಲಿಂಗಯ್ಯ ಮಹಾಸ್ವಾಮಿಗಳು ಹೊಸ ಹೊಸ ಸಂಕಲ್ಪದೊಂದಿಗೆ ಸಾಗುತ್ತಿರುವದು ಈ ಭಾಗದಲ್ಲಿ ಚೈತನ್ಯ ಹುಮ್ಮಸ್ಸು ಮೂಡಿಸಿದೆ ಎಂದರು.

ಇನ್ನೋರ್ವ ದೇವರಹಿಪ್ಪರಗಿ ಜಡಿಮಠದ ಶ್ರೀ ಜಡಿಸಿದ್ದೇಶ್ವರ ಮಹಾಸ್ವಾಮಿಗಳು ಮಾತನಾಡಿ ಸಿದ್ದಿಪುರುಷ ಶ್ರೀ ರಾಮಲಿಂಗೇಶ್ವರ ಮಠದ ಧರ್ಮಾಧಿಕಾರಿ ಶ್ರೀ ರಾಮಲಿಂಗಯ್ಯ ಮಹಾಸ್ವಾಮಿಗಳು ಈ ಭಾಗದಲ್ಲಿಯೇ ಹೊಸ ಇತಿಹಾಸ ಸೃಷ್ಟಿಸಿದ ಮಠವಾಗಿ ಹೊರಹೊಮ್ಮಿದೆ ನೂತನ ಮಠದ ಉದ್ಘಾಟನೆಯ ನಂತರ ಶ್ರೀಮಠಕ್ಕೆ ಆಗಮಿಸುವ ಭಕ್ತರಿಗೆ ನಿತ್ಯ ಉಚಿತ ಪ್ರಸಾದದ ವ್ಯವಸ್ಥೆ ಕಲ್ಪಿಸಿದ್ದಾರೆ ಮುಂದಿನ ದಿನಗಳಲ್ಲಿ ಅನಾಥ ಮಕ್ಕಳಿಗಾಗಿಯೇ ಶ್ರೀಮಠದಲ್ಲಿ ಶಾಲೆಯನ್ನು ಪ್ರಾರಂಬಿಸಿ ಅವರಿಗೆ ಉಚಿತ ಶಿಕ್ಷಣ ನೀಡಲು ಸಂಕಲ್ಪತೊಟ್ಟಿರುವದು ಹೊಸ ಬೀರುಗಾಳಿ ಎಬ್ಬಿಸಿದಂತಾಗಿದೆ ಧರ್ಮಾಧಿಕಾರಿಯಾಗಿ ಧರ್ಮದ ಕಾರ್ಯಕ್ಕೆ ತ್ಮ ಜೀವನವನ್ನು ಮುಡಿಪಾಗಿಟ್ಟು ಸಾಗಿರುವ ಶ್ರೀರಾಮಲಿಂಗಯ್ಯ ಶ್ರೀಗಳಿಗೆ ಸಿದ್ದಿಪುರುಷ ಶ್ರೀರಾಮಲಿಂಗೇಶ್ವರರ ಸಿದ್ದಿಯ ಶಕ್ತಿ ಅಡಗಿದೆ ಎಂದರು.

ನಾವದಗಿ ಬೃಹನ್ ಮಠದ ಶ್ರೀ ರಾಜಗುರು ರಾಜೇಂದ್ರ ಒಡೆಯರ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿದರು. ಈ ಸಮಯದಲ್ಲಿ ವೇ.ಗುರುಮೂರ್ತಿ ದೇವರು, ಶಿವರಾಜ ಗಣಾಚಾರಿ, ಶರಣಯ್ಯ ಸ್ವಾಮಿಗಳು, ಸೋಮನಗೌಡ ಪಾಟೀಲ, ಮಲ್ಲನಗೌಡ ಬಿರಾದಾರ, ಶರಣಯ್ಯ ಘನಸಿದ್ದಯ್ಯ ಹಿರೇಮಠ ಉಪಸ್ಥಿತರಿದ್ದರು. ಚಬನೂರ ಸಿದ್ದಿ ಪುರುಷ ಶ್ರೀರಾಮಲಿಂಗೇಶ್ವರ ಮಠದ ಧರ್ಮಾಧಿಕಾರಿ ಶ್ರೀ ರಾಮಲಿಂಗಯ್ಯ ಮಹಾಸ್ವಾಮಿಗಳಿಗೆ ಶಿಬಿರಾರ್ಥಿ ಮಕ್ಕಳ ಪಾಲಕರು ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮಕ್ಕೂ ಮುಂಚೆ ಬೆಳಗಿನ ಜಾವ ಜಂಗಮ ವಟುಗಳಿಗೆ ಅಯ್ಯಾಚಾರ, ಮಕ್ಕಳಿಂದ ತಂದೆ-ತಾಯಿಯ ಪಾದ ಪೂಜೆ, ಮಕ್ಕಳಿಂದ ವೇದ ಉಪನಿಷತ್ತು ಮಠಣ, ಮಕ್ಕಳಿಂದ ಸಿದ್ದಿ ಪುರುಷ ಶ್ರೀರಾಮಲಿಂಗೇಶ್ವರರ ಗದ್ದುಗೆಗೆ ರುದ್ರಾಭಿಷೇಕ, ಬಿಲ್ವಾರ್ಚನೆ, ಪುಷ್ಪಾರ್ಚನೆ, ಮಹಾ ಮಂಗಳಾರತಿ, ಶಿಬಿರಾರ್ಥಿಗಳಿಗೆ ಪ್ರಮಾಣ ಪತ್ರ ವಿತರಣೆ, ನೇರವೇರಿತು.

> "ಭಕ್ತರ ಅಪೇಕ್ಷೆಯಂತೆ ನೂತನಮಠ ನಿರ್ಮಿಸಿ ಎಲ್ಲ ಧಾರ್ಮಿಕ ಕಾರ್ಯಗಳಿಗೆ ಶ್ರೀಮಠವನ್ನು ಅರ್ಪಿಸಲಾಗಿದೆ ನಿತ್ಯ ಭಕ್ತರಿಗೆ ಉಚಿತ ಪ್ರದಾದದ ವ್ಯವಸ್ಥೆ ಶ್ರೀಮಠದಲ್ಲಿ ಕಲ್ಪಿಸಲಾಗಿದೆ ಮಕ್ಕಳ ಬಧುಕಿಗಾಗಿ ವೈದಿಕ ಸಂಸ್ಕಾರ ಶಿಬಿರ ನಡೆಸಿ ಯಶಸ್ವಿ ಮಾಡಲಾಗಿದೆ ಮುಂದಿನ ದಿನಗಳಲ್ಲಿ ಅನಾತ ಮಕ್ಕಳಿಗೆ ಶ್ರೀಮಠದಲ್ಲಿ ಉಚಿತ ಶಿಕ್ಷಣ ಒದಗಿಸುವದರೊಂದಿಗೆ ಉಚಿತ ಸಾಮೂಹಿಕ ವಿವಾಹ ಮಾಡಬೇಕೆಂಬ ಸಂಕಲ್ಪವನ್ನು ತೊಟ್ಟಿದ್ದೇನೆ."
>
> ಜ್ಯೋತಿಷ್ಯ ರತ್ನ ಶ್ರೀ ರಾಮಲಿಂಗಯ್ಯ ಮಹಾಸ್ವಾಮಿಗಳು ಚಬನೂರ ಮಠದ ಧರ್ಮಾಧಿಕಾರಿ

# ಅಧಿಕಾರಿಗಳ ಬೇಜವಾಬ್ದಾರಿತನಕ್ಕೆ ಗ್ರಾಮಸ್ಥರು ತತ್ತರ; ನಾಲತವಾಡ ಹೆಸ್ಕಾಂ ಕಚೇರಿಗೆ ಮುತ್ತಿಗೆ ಹಾಕಿ ಉಗ್ರ ಹೋರಾಟದ ಎಚ್ಚರಿಕೆ



ಮುದ್ದೇಬಿಹಾಳ: ಗ್ರಾಮೀಣ ಭಾಗದಲ್ಲಿ ಟಿಸಿ (ವಿದ್ಯುತ್ ಪರಿವರ್ತಕ) ಸುಟ್ಟರೆ 24 ಗಂಟೆಯೊಳಗೆ ಬದಲಾಯಿಸಬೇಕು" ಎಂಬ ರಾಜ್ಯ ಸರ್ಕಾರದ ಗಡುವು ಕೇವಲ ಕಾಗದ ಕ್ಕಷ್ಟೇ ಸೀಮಿತವಾಗಿದೆಯೇ? ಇಂತಹ ದೊಂದು ಆಕ್ರೋಶದ ಪ್ರಶ್ನೆ ಈಗ ತಾಲ್ಲೂಕಿನ ಚವನಭಾವಿ ಗ್ರಾಮಸ್ಥರಿಂದ ಕೇಳಿ ಬರುತ್ತಿದೆ. ನಾಲತವಾಡ ಹೆಸ್ಕಾಂ ಅಧಿಕಾರಿಗಳ ಅಟ್ಟಹಾಸ ಮತ್ತು ಲೈನ್ ಮ್ಯಾನ್ ನಿರ್ಲಕ್ಷ್ಯದಿಂದಾಗಿ ಇಡೀ ಗ್ರಾಮವೇ ಕತ್ತಲಲ್ಲಿ ಮುಳುಗಿದ್ದು, ಪರಿಸ್ಥಿತಿ ಗಂಭೀರವಾಗಿದೆ.

ಗ್ರಾಮದಲ್ಲಿ ವಿದ್ಯುತ್ ಕಣ್ಣಾಮುಚ್ಚಾಲೆ ಹೊಸದೇನಲ್ಲ. ಕಳೆದ 15 ದಿನಗಳಿಂದ ಸರ್ಕಾರಿ ಶಾಲೆ ಮುಂದಿನ ಟಿಸಿಯಲ್ಲಿ ಪದೇ ಪದೇ ಡಿವಲ್ ಹೋಗುತ್ತಿತ್ತು. ಅದೀಗ ಸಂಪೂರ್ಣವಾಗಿ ಸುಟ್ಟು ಮೂರು ದಿನ ಕಳೆದಿದೆ. ಇನ್ನು ಗ್ರಾಮದ ಆಂಜನೇಯ ದೇವಸ್ಥಾನದ ಮುಂದಿನ ಮತ್ತೊಂದು ಟಿಸಿ ಸುಟ್ಟು ಬರೋಬ್ಬರಿ ಮೂರು ತಿಂಗಳು ಕಳೆದಿದೆ! ಆದರೂ ಹೆಸ್ಕಾಂ ಅಧಿಕಾರಿಗಳಿಗೆ ಮಾತ್ರ ಕಣ್ಣು ತೆರೆದಿಲ್ಲ.

**ತುಘಲಕ್ ದರ್ಬಾರ್: ಕುಡಿಯುವ ನೀರಿಗೂ ತತ್ವಾರ!**

ಬೇಸಿಗೆಯ ಬಿಸಿ ಇನ್ನೂ ಪೂರ್ತಿ ಇಳಿದಿಲ್ಲ. ಇಂತಹ ಸಂದರ್ಭದಲ್ಲಿ ಮೂರು ದಿನಗಳಿಂದ ಗ್ರಾಮದಲ್ಲಿ ಸಂಪೂರ್ಣ ವಿದ್ಯುತ್ ಸಂಪರ್ಕ ಕಡಿತಗೊಂಡಿರುವುದರಿಂದ ಗ್ರಾಮಸ್ಥರು ಕುಡಿಯುವ ನೀರಿಗೂ ಪರದಾಡುವಂತಾಗಿದೆ. ಸರ್ಕಾರದ ನಿಯಮಗಳನ್ನು ಗಾಳಿಗೆ ತೂರಿ, ಸಾರ್ವಜನಿಕರ ಜೀವನದ ಜೊತೆ ಆಟವಾಡುತ್ತಿರುವ ನಾಲತವಾಡ ಹೆಸ್ಕಾಂ ಅಧಿಕಾರಿಗಳ ನಡೆಗೆ ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ.

**ಲೈನ್ ಮ್ಯಾನ್ ನಾಪತ್ತೆ, ಅಧಿಕಾರಿಗಳ ಉಡಾಫೆ:** ಚವನಭಾವಿ ಗ್ರಾಮದ ಲೈನ್ ಮ್ಯಾನ್ ತನಗೂ ಗ್ರಾಮಕ್ಕೂ ಸಂಬಂಧವೇ ಇಲ್ಲದಂತೆ ವರ್ತಿಸುತ್ತಿದ್ದು, ಕರ್ತವ್ಯಕ್ಕೆ ಕಡುವೈರಿಯಾಗಿದ್ದಾನೆ. ಇನ್ನು ನಾಲತವಾಡ ಹೆಸ್ಕಾಂ ಶಾಖಾಧಿಕಾರಿಗಳಿಗೆ ಗ್ರಾಮಸ್ಥರು ಫೋನ್ ಮಾಡಿ ಗೋಗರೆದರೂ ಕನಿಷ್ಠ ಸೌಜನ್ಯಕ್ಕೂ ಸ್ಪಂದಿಸುತ್ತಿಲ್ಲ. ಸರ್ಕಾರದ ಕಟ್ಟುನಿಟ್ಟಿನ ಆದೇಶವಿದ್ದರೂ ಗ್ರಾಹಕರ ಕರೆಗಳಿಗೆ ಸಿಗದ ಅಧಿಕಾರಿಗಳ ವಿರುದ್ಧ ಸರ್ಕಾರ ತಕ್ಷಣ ಶಿಸ್ತುಕ್ರಮ ಕೈಗೊಳ್ಳಬೇಕಿದೆ.

**ಸರಕಾರಕ್ಕೆ ನೇರ ಎಚ್ಚರಿಕೆ: ಉಗ್ರ ಹೋರಾಟದ ಹಾದಿ:** "ಅಧಿಕಾರಿಗಳ ಇಂತಹ ಬೇಜವಾಬ್ದಾರಿತನ ಹೀಗೆಯೇ ಮುಂದುವರಿದರೆ ನಾವು ಸುಮ್ಮನೆ ಕೂರುವುದಿಲ್ಲ. ತಕ್ಷಣವೇ ಚವನಭಾವಿ ಗ್ರಾಮಕ್ಕೆ ಹೊಸ ಟಿಸಿಗಳನ್ನು ಅಳವಡಿಸಿ ವಿದ್ಯುತ್ ಪೂರೈಕೆ ಸರಿಪಡಿಸದಿದ್ದರೆ, ಇಡೀ ಗ್ರಾಮಸ್ಥರು ಒಟ್ಟಾಗಿ ನಾಲತವಾಡ ಹೆಸ್ಕಾಂ ಶಾಖಾ ಕಚೇರಿಗೆ ಮುತ್ತಿಗೆ ಹಾಕಿ ಉಗ್ರ ಪ್ರತಿಭಟನೆ ನಡೆಸಲಿದ್ದೇವೆ" ಎಂದು ಗ್ರಾಮದ ಪ್ರಮುಖರು ಸರ್ಕಾರ ಹಾಗೂ ಹೆಸ್ಕಾಂ ಇಲಾಖೆಗೆ ಗ್ರಾಮಸ್ಥರು ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಯಲ್ಲಪ್ಪ ಕಾರಕೂರ, ಹುಲಗಪ್ಪ ಬಿರಾದಾರ, ಮಧುಕುಮಾರ ಪಾಟೀಲ, ಹಣಮಂತ ಪೂಜಾರಿ, ಸೋಮು ಬಿರಾದಾರ, ಹುಸನಪ್ಪ ಗೋಗಿ, ಹಣಮಂತ ಕಾರಕೂರ, ಮುದಕಪ್ಪ ಮದರಿ, ಸಿದ್ದಪ್ಪ ಬಿರಾದಾರ, ಬಸವರಾಜ ಕುಂಬಾರ, ಸಣ್ಣಬಸಪ್ಪ ಕುಂಬಾರ, ಬಸಪ್ಪ ಬಿರಾದಾರ, ಲಕ್ಷ್ಮಣ ಈಳಗೇರ, ರಾಮಣ್ಣ ಈಳಗೇರ ಹಾಗೂ ಮಾಜಿ ಗ್ರಾಪಂ ಸದಸ್ಯರಾದ ಯಮನಪ್ಪ ಚಲವಾದಿ, ಮರೆಪ್ಪ ಚಲವಾದಿ, ವಿರೇಶ ಚಲವಾದಿ, ಮೌನೇಶ ಚಲವಾದಿ ಸೇರಿದಂತೆ ಗ್ರಾಮದ ನೂರಾರು ಸಾರ್ವಜನಿಕರು ಉಪಸ್ಥಿತರಿದ್ದು ಆಕ್ರೋಶ ಹೊರಹಾಕಿದರು.

# ಮತಾಂತರ ತಡೆಗಟ್ಟುವ ನಿಟ್ಟಿನಲ್ಲಿ ತಾಂಡಾಗಳಲ್ಲಿ ಜಾಗೃತಿ ಆಂದೋಲನ



ಗದಗ : ಮತಾಂತರ ತಡೆಗಟ್ಟುವ ಉದ್ದೇಶದಿಂದ ತಾಂಡಾಗಳಲ್ಲಿ ಶೀಘ್ರದಲ್ಲೇ ಜಾಗೃತಿ ಕಾರ್ಯಕ್ರಮಗಳು ಹಾಗೂ ಹೋರಾಟಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಗೋರಸೇನಾ (ಬಂಜಾರ) ರಾಜ್ಯಾಧ್ಯಕ್ಷ ಹಾಗೂ ವಕೀಲರಾದ ರವಿಕಾಂತ ಅಂಗಡಿ ತಿಳಿಸಿದ್ದಾರೆ.

ಶಿರಹಟ್ಟಿ ತಾಲೂಕಿನ ಮಜ್ಜೂರ ತಾಂಡಾದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಗದಗ ನಗರದ ವಿಡಿಎಸ್‌ಟಿ ಮೈದಾನದಲ್ಲಿ ಮೇ 31, 2026ರಂದು ಆಯೋಜಿಸಲಾಗಿರುವ ಬಸವಾದಿ ಶರಣರ ಹಿಂದೂ ಬೃಹತ್ ಸಮಾವೇಶದ ಕುರಿತು ಮಾಹಿತಿ ನೀಡಿದರು. ಸಮಾಜದಲ್ಲಿ ಧರ್ಮರಕ್ಷಣೆ, ಸಾಂಸ್ಕೃತಿಕ ಜಾಗೃತಿ ಹಾಗೂ ಮತಾಂತರ ತಡೆಗೆ ಸಂಬಂಧಿಸಿದಂತೆ ವ್ಯಾಪಕ ಜನಜಾಗೃತಿ ಮೂಡಿಸುವುದು ಸಮಾವೇಶದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ಲಕ್ಷ್ಮೇಶ್ವರ ತಾಲೂಕಿನ ಆದರಳ್ಳಿ ತಾಂಡಾದಲ್ಲಿ ಚರ್ಚ್ ನಿರ್ಮಾಣ ಹಾಗೂ ಮತಾಂತರದ ಆರೋಪಗಳ ಕುರಿತು ಸಭೆಯಲ್ಲಿ ಚರ್ಚೆ ನಡೆಸಿ, ಈ ಹಿನ್ನೆಲೆಯಲ್ಲಿ ತಾಂಡಾಗಳಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ "ಚರ್ಚ್ ಹಟಾವೋ–ತಾಂಡಾ ಬಚಾವೋ" ಅಭಿಯಾನ ಹಮ್ಮಿಕೊಳ್ಳುವ ಕುರಿತು ಚಿಂತನೆ ನಡೆಸಲಾಗುತ್ತಿದ್ದು ಇದಕ್ಕೆ ತಮ್ಮೆಲ್ಲರ ಸಹಕಾರ ಅತ್ಯವಶ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಕೇಶರಟ್ಟಿ ಶಂಕರಲಿಂಗ ಮಠದ ಪರಮ ಪೂಜ್ಯ ಶ್ರೀ ಸೋಮಲಿಂಗ ಮಹಾಸ್ವಾಮೀಜಿ, ಬಂಜಾರ ಸಮುದಾಯದ ಸಂಸ್ಕೃತಿ, ಪರಂಪರೆ ಹಾಗೂ ಧಾರ್ಮಿಕ ಮೌಲ್ಯಗಳನ್ನು ಉಳಿಸಿ ಬೆಳೆಸುವ ಅಗತ್ಯವನ್ನು ಒತ್ತಿಹೇಳಿದರು. ಯುವ ಸಮುದಾಯ ದುಶ್ಚಟಗಳಿಂದ ಬಲಿಯಾಗುತ್ತಿದ್ದು ಅವುಗಳನ್ನು ತೊಡೆದು ಹಾಕಿ, ಯುವ ಪೀಳಿಗೆಯಲ್ಲಿ ಸಾಂಸ್ಕೃತಿಕ ಹಾಗೂ ನೈತಿಕ ಮೌಲ್ಯಗಳನ್ನು ಬೆಳೆಸುವ ಮೂಲಕ ಸಮಾಜವನ್ನು ಮತ್ತಷ್ಟು ಸದೃಢಗೊಳಿಸಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಮುಂಡರಗಿ ತಾಲೂಕಿನ ವಿರುಪಾಪೂರ ತಾಂಡಾ, ಶಿರಹಟ್ಟಿ ತಾಲೂಕಿನ ಮಜ್ಜೂರ ತಾಂಡಾ ಹಾಗೂ ಛಬ್ಬಿ ತಾಂಡಾ ಸೇರಿದಂತೆ ವಿವಿಧ ತಾಂಡಾಗಳಿಗೆ ಭೇಟಿ ನೀಡಿ, ಮೇ 31ರಂದು ಗದಗ ನಗರದ ವಿಡಿಎಸ್‌ಟಿ ಮೈದಾನದಲ್ಲಿ ನಡೆಯಲಿರುವ ಬಸವಾದಿ ಶರಣರ ಹಿಂದೂ ಬೃಹತ್ ಸಮಾವೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಗ್ರಾಮಸ್ಥರಲ್ಲಿ ಮನವಿ ಮಾಡಲಾಯಿತು.

ನಾಳೆ ನಡೆಯಲಿರುವ ಹಿಂದೂ ಬೃಹತ್ ಸಮಾವೇಶದ ಮೂಲಕ ಧರ್ಮರಕ್ಷಣೆ, ಸಾಮಾಜಿಕ ಜಾಗೃತಿ ಹಾಗೂ ಬಂಜಾರ ಸಮುದಾಯದ ಸಾಂಸ್ಕೃತಿಕ ಪರಂಪರೆಯ ಸಂರಕ್ಷಣೆಗೆ ಸಂಬಂಧಿಸಿದ ವಿಚಾರಗಳನ್ನು ಜನರಿಗೆ ತಲುಪಿಸುವ ಉದ್ದೇಶ ಹೊಂದಲಾಗಿದೆ ಎಂದು ಸಂಘಟಕರು ತಿಳಿಸಿದರು.

ಈ ಸಂದರ್ಭದಲ್ಲಿ ಪರಮೇಶ ನಾಯ್ಕ, ಪೂರಪ್ಪ ನಾಯಕ, ತುಕಾರಾಮ ಲಮಾಣಿ, ಸುರೇಶ್ ಲಮಾಣಿ ಸೇರಿದಂತೆ ವಿರುಪಾಪೂರ ತಾಂಡಾ, ಮಜ್ಜೂರ ತಾಂಡಾ ಹಾಗೂ ಛಬ್ಬಿ ತಾಂಡಾದ ನಾಯಕ, ಡಾವ್, ಕಾರಭಾರಿ, ಮುಖಂಡರು, ಯುವಕರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ನಿಯೋಜಿತ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ಗೆ ಶುಭ ಕೋರಿದ ಸಂತೋಷ್ ಲಾಡ್



ಬೆಂಗಳೂರು: ಕಲಘಟಗಿ– ಅಳ್ನಾವರ ಮತಕ್ಷೇತ್ರದ ಶಾಸಕರಾದ ಸಂತೋಷ್ ಲಾಡ್ ಅವರು, ನಿಯೋಜಿತ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರನ್ನು ಭೇಟಿ ಮಾಡಿ ಶುಭ ಕೋರಿದರು.

ಶನಿವಾರ ನಡೆದ ಶಾಸಕಾಂಗ ಪಕ್ಷದ ಸಭೆಯಲ್ಲಿ ಶಾಸಕಾಂಗ ಪಕ್ಷದ ನೂತನ ನಾಯಕರಾಗಿ ಡಿ.ಕೆ. ಶಿವಕುಮಾರ್ ಅವರು ಸರ್ವಾನುಮತದಿಂದ ಆಯ್ಕೆಯಾಗಿದ್ದರು.

ನೂತನ ಮುಖ್ಯಮಂತ್ರಿಗಳಾಗಿ ಡಿ ಕೆ ಶಿವಕುಮಾರ್ ಅವರು ಜೂನ್ 3 ರಂದು ಲೋಕಭವನದಲ್ಲಿ ಪ್ರಮಾಣವಚನ ಸ್ವೀಕರಿಸಲಿದ್ದಾರೆ.

# ಹುಬ್ಬಳ್ಳಿಯಲ್ಲಿ ಡಿಕೆಶಿ ಭಾವಚಿತ್ರಕ್ಕೆ ಕ್ಷೀರಾಭಿಷೇಕ



ಹುಬ್ಬಳ್ಳಿ: ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ಶನಿವಾರ ಸಂಜೆ ಸಿಎಲ್‌ಪಿ ನಾಯಕರಾಗಿ ಆಯ್ಕೆಯಾಗುತ್ತಿದ್ದಂತೆ ವಿದ್ಯಾನಗರ ಬ್ಲಾಕ್ ಕಾಂಗ್ರೆಸ್ ಸಮಿತಿ ವತಿಯಿಂದ ಗೋಕುಲ ರಸ್ತೆಯ ಅಕ್ಷಯ ಪಾರ್ಕ್ ವೃತ್ತದಲ್ಲಿ ಸಂಭ್ರಮಾಚರಣೆ ಮಾಡಿದರು.


ಈ ಕಾರ್ಯಕ್ರಮದಲ್ಲಿ ಪಕ್ಷದ ಹಿರಿಯ ಮುಖಂಡರು, ಸ್ಥಳೀಯ ಪದಾಧಿಕಾರಿಗಳು ಮತ್ತು ಅಪಾರ ಸಂಖ್ಯೆಯ ಕಾರ್ಯಕರ್ತರು ಭಾಗವಹಿಸಿದ್ದರು. ಡಿ.ಕೆ. ಶಿವಕುಮಾರ ಭಾವಚಿತ್ರಕ್ಕೆ ಕ್ಷೀರಾಭಿಷೇಕ ಮಾಡುವ ಮೂಲಕ ಕಾರ್ಯಕರ್ತರು ಸಿಹಿ ಹಂಚಿ, ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಿದ್ಯಾನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಜತ್ ಉಳ್ಳಾಗಡ್ಡಿ, ಡಿ.ಕೆ. ಶಿವಕುಮಾರ್ ಅವರೊಂದಿಗಿನ ನನ್ನ ಬಾಂಧವ್ಯ ಬಹಳ ಹಳೆಯದು ಮತ್ತು ಭಾವನಾತ್ಮಕವಾದದ್ದು. ಅವರು ನನ್ನ ತಂದೆಯವರ ಆತ್ಮೀಯ ಒಡನಾಡಿಯಾಗಿದ್ದರು. ಅಷ್ಟೇ ಅಲ್ಲದೆ, ನಮ್ಮ ರಂಭಾಪುರಿ ಪೀಠದ ವೀರ ಗಂಗಾಧರ ಜಗದ್ಗುರುವಿನ ಶಿಷ್ಯರಾಗಿ, ನನ್ನ ಜೀವನದ ಪ್ರತಿ ಹಂತದಲ್ಲೂ ನನಗೆ ಒಬ್ಬ ಮಾರ್ಗದರ್ಶಕರಾಗಿ, ಪ್ರೇರಣೆಯಾಗಿ ಮತ್ತು ದಾರಿದೀಪವಾಗಿ ನಿಂತಿದ್ದಾರೆ ಎಂದರು.

ಅವರಲ್ಲಿರುವ ಸಂಘಟನಾ ಚತುರತೆ, ಬದ್ಧತೆ ಮತ್ತು ಕಷ್ಟದ ಸಮಯದಲ್ಲೂ ಸ್ಥಿರವಾಗಿ ನಿಲ್ಲುವ ಗುಣ ನಮಗೆಲ್ಲರಿಗೂ ಆದರ್ಶಪ್ರಾಯ. ಅವರ ನೇತೃತ್ವದಲ್ಲಿ ಕರ್ನಾಟಕ ರಾಜ್ಯವು ಸರ್ವತೋಮುಖ ಅಭಿವೃದ್ಧಿಯನ್ನು ಕಾಣಲಿದೆ ಮತ್ತು ಜನಸಾಮಾನ್ಯರ ಆಶೋತ್ತರಗಳನ್ನು ಈಡೇರಿಸುವಲ್ಲಿ ಅವರು ಯಶಸ್ವಿಯಾಗಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಗ್ಯಾರಂಟಿ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷ ವೀರೇಶ್ ಕಡಕೊಳಮಠ, ಷರೀಫ್ ಗರ್ಗದ, ಪಾಲಿಕೆ ಸದಸ್ಯ ಸೆಂಥಿಲ್ ಕುಮಾರ್, ಸಾಧಿಕ್ ಯಕ್ಕುಂಡಿ, ಸುವರ್ಣ ಕಲ್ಲಕುಂಟ್ಲ, ಇಕ್ಬಾಲ್ ನವಲೂರ, ಸಂಗಮೇಶ್ ಗೌರಕ್ಕನವರ, ಮದಾರ್ ಮಕಾಂದರ, ಸಂತೋಷ್ ನಾಯಕ್, ಮಹೇಶ್, ದೀಪಕ್, ರಘುವೀರ್ ಪಾಟೀಲ್, ಬಸವರಾಜ್ ಮ್ಯಾಗೆಡಿ, ಪರ್ವೇಜ್ ಕಟ್ಟಿಮನಿ, ವಿದ್ಯಾನಗರ ಬ್ಲಾಕ್ ಕಾಂಗ್ರೆಸ್ ಸಮಿತಿಯ ಪದಾಧಿಕಾರಿಗಳು ಮತ್ತು ಸ್ಥಳೀಯ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

# ಈಜಲು ಹೋಗಿದ್ದ ಮೂವರು ಬಾಲಕರು ನೀರುಪಾಲು



ಧಾರವಾಡ: ಕೆರೆಗೆ ಈಜಲು ಹೋಗಿದ್ದ ಮೂವರು ಅಪ್ರಾಪ್ತ ಬಾಲಕರು ನೀರಿನಲ್ಲಿ ಮುಳುಗಿ ಮೃತಪಟ್ಟ ಘಟನೆ ಧಾರವಾಡ ತಾಲೂಕಿನ ಸಿಂಗನಳ್ಳಿ ಗ್ರಾಮದ ಸಮೀಪದ ಕರೆಮ್ಮನ ಕೆರೆಯಲ್ಲಿ ಶನಿವಾರ ಸಂಭವಿಸಿದೆ.

ಸಿಂಗನಳ್ಳಿ ಗ್ರಾಮದ ನಿವಾಸಿಗಳಾದ ಅನ್ವರ್ ಇಬ್ರಾಹಿಂ ವಟ್ನಾಳ (13), ಸುಭಾನಿ ಇಸಾಕ್ ಬಾಗಜಿಕೊಪ್ಪ (12) ಹಾಗೂ ಮೆಹಬೂಬ್ ಸುಭಾನಿ ದಾದಾಪೀರ್ ವಡ್ನಾಳ (15) ಮೃತಪಟ್ಟ ದುರ್ದೈವಿಗಳು ಎಂದು ಗೊತ್ತಾಗಿದೆ.

ಮೆಹಬೂಬ್ ವಟ್ನಾಳ ಹಾಗೂ ಅನ್ವರ್ ವಟ್ನಾಳ ಸೋದರರು. ಇವರಿಬ್ಬರೂ ಸಿಂಗನಳ್ಳಿ ಗ್ರಾಮದ ನಿವಾಸಿಗಳಾಗಿದ್ದಾರೆ. ಸುಭಾನಿ ಭಾಗಜಿಕೊಪ್ಪ ಬೈಲಹೊಂಗಲ ತಾಲೂಕಿನವನು. ಬೇಸಿಗೆ ರಜೆಗಾಗಿ ಸಂಬಂಧಿಕರ ಮನೆಗೆ ಬಂದಿದ್ದನು. ಬೇಸಿಗೆಯ ತಾಪ ಹೆಚ್ಚಾಗಿದ್ದರಿಂದ ಮೂವರೂ ಬಾಲಕರು ಮಧ್ಯಾಹ್ನದ ವೇಳೆ ಈಜಾಡಲು ಕರೆಮ್ಮನಕೆರೆಗೆ ತೆರಳಿದ್ದರು. ನೀರಿನ ಆಳ ತಿಳಿಯದೇ ಒಬ್ಬರನ್ನೊಬ್ಬರು ರಕ್ಷಿಸಲು ಹೋಗಿ ಮೂವರೂ ನೀರಿನಲ್ಲಿ ಮುಳುಗಿದ್ದಾರೆ ಎನ್ನಲಾಗಿದೆ.

ಬಾಲಕರು ಮನೆಗೆ ಬಾರದೇ ಇದ್ದಾಗ ಆತಂಕಗೊಂಡ ಪೋಷಕರು ಹುಡುಕಾಟ ನಡೆಸಿದಾಗ ಘಟನೆ ಬೆಳಕಿಗೆ ಬಂದಿದೆ. ಘಟನಾ ಸ್ಥಳಕ್ಕೆ ಗರಗ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಗ್ರಾಮಸ್ಥರ ನೆರವಿನಿಂದ ಶವಗಳನ್ನು ಹೊರತೆಗೆಯಲಾಗಿದೆ. ಈ ಕುರಿತು ಗರಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

# ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ ರಜತ ಮಹೋತ್ಸವ ಕುರಿತು ಪೂರ್ವಭಾವಿ ಸಭೆ

## ಜೂ. 7 ರಂದು ಕೊಪ್ಪಳದ ಗವಿದ್ದೇಶ್ವರ ಶ್ರೀಗಳಿಂದ ವರ್ಷಪೂರ್ತಿ ಕಾರ್ಯಕ್ರಮಗಳಿಗೆ ಚಾಲನೆ : ಕೃಷ್ಣಗೌಡ್ರ ಪಾಟೀಲ

ಗದಗ : ನಗರದ ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯು 25 ನೇ ವರ್ಷಾಚರಣೆಯ ಅಂಗವಾಗಿ 25 ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ಸ್ವಾಗತಾರ್ಹವಾಗಿದೆ ಮತ್ತು ವರ್ಷಪೂರ್ತಿಯ ಕಾರ್ಯಕ್ರಮಗಳಿಗೆ ಇದೇ ಜೂ. 7 ರಂದು ಕೊಪ್ಪಳದ ಗವಿಸಿದ್ಧೇಶ್ವರ ಶ್ರೀಗಳು ಚಾಲನೆ ನೀಡುತ್ತಿರುವದು ಹೆಮ್ಮೆಯ ವಿಷಯವಾಗಿದೆ ಎಂದು ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ್ರ ಪಾಟೀಲ ಅವರು ಹೇಳಿದರು.



ನಗರದ ದೇವರಾಜ ಅರಸು ಹಾಸ್ಟೆಲ್ ಕಚೇರಿಯಲ್ಲಿ ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ ರಜತ ಮಹೋತ್ಸವ ಕುರಿತು ಶನಿವಾರ ಜರುಗಿದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿ, ಈ ರಜತ ಮಹೋತ್ಸವವನ್ನು ಇನ್ನಷ್ಟು ಉತ್ತಮವಾಗಿ, ಅಭೂತಪೂರ್ವವಾಗಿ ಆಚರಿಸಲು ಜಿಲ್ಲೆಯ ಸಂಗೀತ, ಸಾಂಸ್ಕೃತಿಕ, ಕಲೆ ಸೇರಿದಂತೆ ವಿವಿದ ಕ್ಷೇತ್ರದಲ್ಲಿ ಸಾಧನೆ ಮಾಡಿದ 25 ಸಾಧಕರನ್ನು ಗುರುತಿಸಿ ಗೌರವಿಸಬೇಕು. ಜಿಲ್ಲೆಯ ನಿರುದ್ಯೋಗ ಯುವಕ/ಯುವತಿಯರಿಗೆ ಕೌಶಲ್ಯಾಭಿವೃದ್ದಿ ಕುರಿತು ವಿಶೇಷ ಕಾರ್ಯಕ್ರಮ ಮತ್ತು ಕೆರಿಯರ್ ಗೈಡೆನ್ಸ್ ಕುರಿತು ಕಾರ್ಯಕ್ರಮ ಆಯೋಜಿಸಿ ಮಾರ್ಗದರ್ಶನ ನೀಡಿದರೆ ಜಿಲ್ಲೆಯ ನಿರುದ್ಯೋಗಿಗಳು ಸ್ವಾವಲಂಬಿಯಾಗಿ ಬದುಕುತ್ತಾರೆ. ಮತ್ತು ಮಕ್ಕಳಿಗಾಗಿ ವಿಶೇಷ ಕ್ರೀಡೆಗಳು ಅಂದರೆ ಬಾಡ್ಮಿಂಟನ್ ಮತ್ತು ಸ್ಕೇಟಿಂಗ್ ನಂತಹ ಕ್ರೀಡೆಗಳನ್ನು ಆಯೋಜಿಸಿದರೆ ಉತ್ತಮವಾಗುತ್ತದೆ ಎಂದು ಹೇಳಿದರು.

ಇನ್ನೂ ಆರೋಗ್ಯ ಶಿಬಿರ ಹಮ್ಮಿಕೊಳ್ಳುವದಾದರೆ ನಮ್ಮ ಆರ್‌ಎಂಎಸ್ ಸಂಸ್ಥೆ ವತಿಯಿಂದ ಸಂಪೂರ್ಣ ಸಹಕಾರ ನೀಡಲಾಗುವುದು ಮತ್ತು ಪರಿಸರ ದಿನಾಚರಣೆಯ ಅಂಗವಾಗಿ ಬರಿ ಸಸಿ ನೆಡುವದನ್ನು ಬಿಟ್ಟು ಮುಂದಿನ ಭವಿಷ್ಯದ ದಿನಗಳ ಬಗ್ಗೆ ಯೋಚಿಸಿ ನಗರದ ಹೊರವಲಯದಲ್ಲಿರುವ ರಾಷ್ಟ್ರೀಯ ಹೆದ್ದಾರಿ ರಸ್ತೆ ಡಿವೈಡರ್ ಸುತ್ತಮುತ್ತ ಸಸಿಗಳನ್ನು ನೆಟ್ಟು ಅವುಗಳನ್ನು ನಿರಂತರ ಪೋಷಣೆ ಮಾಡಲು ಕಾರ್ಮಿಕರನ್ನು ನಿಯೋಜಿಸಿ ವ್ಯವಸ್ಥಿತವಾಗಿ ಪರಿಸರ ರಕ್ಷಣೆ ಮಾಡಿದರೆ ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ ಹೆಸರು ಜನಮನದಲ್ಲಿ ಶಾಶ್ವತವಾಗಿರುತ್ತದೆ ಎಂದು ಕೃಷ್ಣಗೌಡ್ರ ಪಾಟೀಲ ಅವರು ಸಲಹೆ ನೀಡಿದರು.

ನಿವೃತ್ತ ನ್ಯಾಯಮೂರ್ತಿ ಎಸ್.ಜಿ. ಪಲ್ಲೇದ ಅವರು ಮಾತನಾಡಿ, ರಜತ ಮಹೋತ್ಸವದ ಕಾರ್ಯಕ್ರಮದಲ್ಲಿ ಕೊಪ್ಪಳದ ಶ್ರೀಗಳಿಗೆ ಆಶೀರ್ವಚನಕ್ಕೆ ಹೆಚ್ಚು ಸಮಯ ನೀಡಿ ಅವರಿಂದ ಹಿತೋಪದೇಶ ಪಡೆಯೋಣ ಎಂದು ಹೇಳಿದರು.

ಆರ್.ಡಿ. ಕಡ್ಲಿಕೊಪ್ಪ ಅವರು ಮಾತನಾಡಿ, ಪರಿಸರ ದಿನಾಚರಣೆಯ ಅಂಗವಾಗಿ ಈ ಪ್ರದೇಶದ ಮನೆಮನೆಗಳಿಗೆ ಸಸಿಗಳನ್ನು ನೀಡಿ ಅವುಗಳನ್ನು ರಕ್ಷಣೆ ಮಾಡುವಂತೆ ಮನವಿ ಮಾಡಬೇಕು ಎಂದು ಹೇಳಿದರು.

ಅಧ್ಯಕ್ಷತೆವಹಿಸಿದ್ದ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕೀರಪ್ಪ ಹೆಬಸೂರ ಅವರು ಮಾತನಾಡಿ, ರಜತ ಮಹೋತ್ಸವದ ಅಂಗವಾಗಿ ಆರೋಗ್ಯಶಿಬಿರ, ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮ ಪರಿಸರ ದಿನಾಚರಣೆ ಸೇರಿದಂತೆ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಲ್ಲರೂ ಸೇರಿಕೊಂಡು ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ ರಜತ ಮಹೋತ್ಸವ ವನ್ನು ಅವಿಸ್ಮರಣೀಯ ವನ್ನಾಗಿಸೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಯಲು ಆಂಜನೇಯ ದೇವಸ್ಥಾನ ಸಮಿತಿಯ ಅಧ್ಯಕ್ಷ ಎಸ್.ಕೆ.ಮ್ಯಾಗೇರಿ, ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ ಅಧ್ಯಕ್ಷ ಬಿ.ಬಿ.ಬಾವಿಕಟ್ಟಿ, ಯಲ್ಲಪ್ಪ ಗುರಿಕಾರ, ಶಶಿಧರ ರೊಳ್ಳಿ, ವೇದಿಕೆ ಮೇಲೆ ಉಪಸ್ಥಿತರಿದ್ದರು.

ಈ ಸಭೆಯಲ್ಲಿ ನಾಗಪ್ಪ ಗುಗ್ಗರಿ, ಆರ್.ಎಂ. ನಿಂಬನಾಯ್ಕರ, ಎಸ್.ಡಿ.ಸಿಂಗಟಾಲಕೇರಿ, ಎಸ್.ಎಸ್. ಮುದಿಯಜ್ಜನವರ, ಆರ್.ಎಸ್. ಕುರಿಯವರ, ಮೋಹನ ಇಮರಾಪೂರ, ಹನುಮಂತಪ್ಪ ಗೊಜನೂರ, ಎಚ್.ಬಿ.ಪೋತಿ, ಬಿ.ಎಚ್. ಹ್ಯಾಟಿ, ಎಸ್.ಎಸ್.ಕರಡಿ, ಡಿ.ವೈ. ವಡಗೇರಿ, ಎ.ಬಿ .ಹುಗ್ಗೆಣ್ಣವರ, ವಿ.ಸಿ.ಚವಡಿಶೆಟ್ರ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

ವೈ.ಬಿ.ಬಾನಾಪೂರ ಸ್ವಾಗತಿಸಿದರು. ನೀಲಕಂಠ ಮರಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೆ.ಬಿ.ಕಂಬಳಿ ವಂದಿಸಿದರು.

# ದ್ವಿದಳ ದಾನ್ಯ ಸಂಸ್ಕರಣೆ, ಪ್ಯಾಕೇಜಿಂಗ್ ಘಟಕ ಸ್ಥಾಪನೆಗೆ ಅರ್ಜಿ

ಬಾಗಲಕೋಟೆ: ಬಾಗಲಕೋಟೆ ಜಿಲ್ಲೆಯಲ್ಲಿ 2026–27ನೇ ಸಾಲಿನ ದ್ವಿದಳ ದಾನ್ಯಗಳಲ್ಲಿ ಆತ್ಮನಿರ್ಭರತಾ ಅಭಿಯಾನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಯಡಿ ಕೊಯ್ಲೋತ್ತರ ಮೂಲಭೂತ ಸೌಕರ್ಯಾಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರಾದ ಟಿ.ಎಸ್.ರುದ್ರೇಶಪ್ಪ ತಿಳಿಸಿದ್ದಾರೆ.

ಯೋಜನೆಯಡಿ ದ್ವಿದಳ ಧಾನ್ಯಗಳ ಸಂಸ್ಕರಣೆ ಹಾಗೂ ಪ್ಯಾಕೇಜಿಂಗ್ ಘಟಕಗಳ ಸ್ಥಾಪನೆಗೆ ಅವಕಾಶ ಕಲ್ಪಿಸಲಾಗಿದ್ದು, ರೈತರ ಆದಾಯ ಹೆಚ್ಚಿಸುವುದು ಹಾಗೂ ದ್ವಿದಳ ಧಾನ್ಯಗಳಲ್ಲಿ ಮೌಲ್ಯವರ್ಧನೆ ಉತ್ತೇಜಿಸುವುದು ಯೋಜನೆಯ ಮುಖ್ಯ ಉದ್ದೇಶವಾಗಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ 60:40 ಅನುಪಾತದ ಸಹಾಯಧನದಡಿ ಯೋಜನಾ ವೆಚ್ಚದ ಶೇ.33 ರಷ್ಟು ಸಹಾಯಧನವನ್ನು (ಗರಿಷ್ಟ ರೂ. 25.00 ಲಕ್ಷಗಳ ಮಿತಿಯೊಂದಿಗೆ) ನೀಡಲಾಗುವುದು. ಘಟಕ ನಿರ್ಮಾಣದ ಭಾಗವಾಗಿ ಕಟ್ಟಡ, ಗೋದಾಮು ಹಾಗೂ ಸಂಗ್ರಹಣಾ ವ್ಯವಸ್ಥೆಗಳ ನಿರ್ಮಾಣಕ್ಕೆ ಅರ್ಹ ಸಹಾಯಧನದ ಮೊತ್ತದ ಗರಿಷ್ಟ ಶೇ.30 ರಷ್ಟು ಹಣವನ್ನು ಬಳಸಿಕೊಳ್ಳಲು ಅವಕಾಶವಿದೆ.

ಸ್ಥಾಪಿಸಲ್ಪಡುವ ದ್ವಿದಳ ಧಾನ್ಯ ಸಂಸ್ಕರಣಾ ಘಟಕಗಳು ಪ್ರತಿ ಗಂಟೆಗೆ ಕನಿಷ್ಟ 300 ಕೆ.ಜಿ. ಸಾಮರ್ಥ್ಯ ಹೊಂದಿರಬೇಕು. ಬಳಕೆಯಾಗುವ ಎಲ್ಲಾ ಯಂತ್ರೋಪಕರಣಗಳು ಬ್ಯೂರೋ ಆಫ್ ಇಂಡಿಯನ್ ಸ್ಟ್ಯಾಂಡರ್ಡ್ಸ್ (ಃಖಖ) ಅಥವಾ ಸಮಾನ ಗುಣಮಟ್ಟದ ಮಾನದಂಡಗಳಿಗೆ ಅನುಗುಣವಾಗಿರಬೇಕು. ಫಲಾನುಭವಿಗಳು ಘಟಕವನ್ನು ಸ್ಥಾಪಿಸಿದ ದಿನಾಂಕದಿಂದ ಕನಿಷ್ಟ ಮೂರು ವರ್ಗಗಳವರೆಗೆ ನಿರ್ವಹಣೆ ಮಾಡುವುದು ಕಡ್ಡಾಯವಾಗಿದೆ. ಯೋಜನಾ ಅನುದಾನದ ದುರುಪಯೋಗ ಕಂಡುಬಂದಲ್ಲಿ ಸರ್ಕಾರದ ಚಾಲ್ತಿಯಲ್ಲಿರುವ ನಿಯಮಗಳ ಪ್ರಕಾರ ದಂಡ ಹಾಗೂ ವಸೂಲಿ ಕ್ರಮ ಕೈಗೊಳ್ಳಲಾಗುವುದು.

ಈ ಯೋಜನೆಯ ಸೌಲಭ್ಯವನ್ನು ರೈತ ಉತ್ಪಾದಕ ಸಂಸ್ಥೆಗಳು, ಕ್ಲಸ್ಟರ್ ಮಟ್ಟದ ಒಕ್ಕೂಟಗಳು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು, ನೋಂದಾಯಿತ ಸಂಸ್ಥೆಗಳು ಹಾಗೂ ವೈಯಕ್ತಿಕ ಫಲಾನುಭವಿ (ಯೋಜನೆ ವೆಚ್ಚದ ಶೇ. 15 ರಷ್ಟು ಸ್ವಂತ ಬಂಡವಾಳ ಹೂಡಿಕೆ ಮಾಡುವ ಸಾಮರ್ಥ್ಯ ಹೊಂದಿರುವುದು) ಗಳು ಪಡೆಯಲು ಅರ್ಹರಾಗಿರುತ್ತಾರೆ. ಆಸಕ್ತರು ತಮ್ಮ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಜೂನ್ 6 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಛೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದ್ದಾರೆ.

# ಪರಿಪೂರ್ಣ ವೈದ್ಯಕೀಯ ಅಧ್ಯಯನಕ್ಕೆ ಕೌಶಲ್ಯಾಭಿವೃದ್ಧಿ ತರಬೇತಿ ಅಗತ್ಯ

ವಿಜಯಪುರ: ಪರಿಪೂರ್ಣ ವೈದ್ಯಕೀಯ ಅಧ್ಯಯನಕ್ಕೆ ಕೌಶಲ್ಯಾಭಿವೃದ್ಧಿ ತರಬೇತಿ ಅಗತ್ಯ ಎಂದು ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಕಾಲೇಜಿನ ಪ್ರಾಚಾರ್ಯೆ ಡಾ. ತೇಜಸ್ವಿನಿ ವಲ್ಲಭ ಹೇಳಿದ್ದಾರೆ.

ಶುಕ್ರವಾರ ನಗರದದಲ್ಲಿ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಶಸ್ತ್ರ ಚಿಕಿತ್ಸೆ ವಿಭಾಗದ ವತಿಯಿಂದ ಜಾನ್ಸನ್ ಅಂಡ್ ಜಾನ್ಸನ್ ಸಂಸ್ಥೆಯ ಸಹಯೋಗದಲ್ಲಿ ಆಯೋಜಿಸಲಾದ ಪ್ರಥಮ ವರ್ಷದ ಶಸ್ತ್ರ ಚಿಕಿತ್ಸೆ ಆಧಾರಿತ ವಿಭಾಗಗಳ ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳ ಕೌಶಲ್ಯಾಭಿವೃದ್ಧಿ ತರಬೇತಿ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಜಾನ್ಸನ್ ಅಂಡ್ ಜಾನ್ಸನ್ ಸಂಸ್ಥೆಯು ದೇಶಾದ್ಯಂತ ವೈದ್ಯಕೀಯ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳಿಗೆ ಚಲಿಸುವ ವಾಹನದ ಮೂಲಕ ಕೌಶಲ್ಯಾಭಿವೃದ್ಧಿ ತರಬೇತಿ ನೀಡುತ್ತಿರುವುದು ಶ್ಲಾಘನೀಯವಾಗಿದೆ. ಬಿ.ಎಲ್.ಡಿ.ಇ. ವೈದ್ಯಕೀಯ ಮಹಾವಿದ್ಯಾಲಯದಲ್ಲಿ ಈಗಾಗಲೇ ವಿಶ್ವದರ್ಜೆಯ ಕೌಶಲ್ಯಾಭಿವೃದ್ಧಿ ಪ್ರಯೋಗಾಲಯ ಕಾರ್ಯನಿರ್ವಹಿಸುತ್ತಿದ್ದು, ಸಾವಿರಾರು ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದಿದ್ದಾರೆ ಎಂದು ಅವರು ತಿಳಿಸಿದರು.

ಶಸ್ತ್ರ ಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ. ಮಂಜುನಾಥ ಕೋಟೆಣ್ಣವರ ಅವರು ಸ್ವಾಗತಿಸಿ ಮಾತನಾಡಿ, ಶಸ್ತ್ರ ಚಿಕಿತ್ಸೆ ಆಧಾರಿತ ವಿಭಾಗಗಳ ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳು ರೋಗಿಗಳಿಗೆ ಸಂಪೂರ್ಣ ಪ್ರಮಾಣದ ಚಿಕಿತ್ಸೆ ನೀಡುವ ಮುನ್ನ ಇಂಥ ಕೌಶಲ್ಯಾಭಿವೃದ್ಧಿ ತರಬೇತಿಗಳು ಅವರ ಆತ್ಮವಿಶ್ವಾಸವನ್ನು ಹೆಚ್ಚಿಸಲು ಸಹಕಾರಿಯಾಗುತ್ತವೆ. ರಾಷ್ಟ್ರೀಯ ವೈದ್ಯಕೀಯ ಆಯೋಗದ (ಎಸ್‌ಎಂಸಿ) ನಿಯಮಾವಳಿಗಳ ಪ್ರಕಾರವೂ ಇಂತಹ ತರಬೇತಿಗಳು ಅತ್ಯಗತ್ಯವಾಗಿವೆ ಎಂದು ಹೇಳಿದರು.

ಶಿಬಿರದಲ್ಲಿ ಬಿ.ಎಲ್.ಡಿ.ಇ. ವೈದ್ಯಕೀಯ ಮಹಾವಿದ್ಯಾಲಯ, ಅಲ್ ಅಮೀನ್ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಜಿಲ್ಲಾ ಆಸ್ಪತ್ರೆಯ ಶಸ್ತ್ರ ಚಿಕಿತ್ಸೆ ವಿಭಾಗ, ಎಲುಬು ಮತ್ತು ಕೀಲು ವಿಭಾಗ ಹಾಗೂ ಸ್ತ್ರೀರೋಗ ವಿಭಾಗಗಳ ಸುಮಾರು 60 ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ತರಬೇತಿಯ ಪ್ರಯೋಜನ ಪಡೆದುಕೊಂಡರು.

ಈ ಸಂದರ್ಭದಲ್ಲಿ ಪ್ರಾಧ್ಯಾಪಕರಾದ ಡಾ. ಎಂ. ಬಿ. ಪಾಟೀಲ, ಡಾ. ವಿಜಯಾ ಪಾಟೀಲ, ಡಾ. ರಮಾಕಾಂತ ಬಳೂರಕರ, ಡಾ. ದೀಪಕ ಚವ್ಹಾಣ, ಡಾ. ದಯಾನಂದ ಬಿರಾದಾರ ಹಾಗೂ ಡಾ. ಪ್ರದೀಪ ಜಾಜು, ಡಾ. ಗಿರೀಶ ಕುಲ್ಲೊಳ್ಳಿ, ಜಾನ್ಸನ್ ಅಂಡ್ ಜಾನ್ಸನ್ ಸಂಸ್ಥೆಯ ಅನಿಲಕುಮಾರ, ಅಮನ್ ಅಥಣಿಕರ, ಶ್ರೀನಿವಾಸ ಮುಂತಾದವರು ಉಪಸ್ಥಿತರಿದ್ದರು.



# ವಾರ್ತಾ ಇಲಾಖೆಯ ವಾಹನ ಸಾರಥಿ ಮಲ್ಲಿಕಾರ್ಜುನ ಕಂಪಲಿ ಅವರ ವ್ಯಕ್ತಿತ್ವ, ಸಜ್ಜನಿಕೆ, ಸರಳತೆಗೆ ಶ್ಲಾಘನೆ: ಉಪ ನಿರ್ದೇಶಕ ಗುರುನಾಥ ಕಡಬೂರ



ಧಾರವಾಡ: ಯಾವುದೇ ಹುದ್ದೆ ದೊಡ್ಡದಲ್ಲ, ವ್ಯಕ್ತಿಯ ವ್ಯಕ್ತಿತ್ವ ದೊಡ್ಡದು. ನಾವು ಮಾಡುವ ಕೆಲಸದಲ್ಲಿ ಶ್ರದ್ಧೆ, ಪ್ರೀತಿ ಹಾಗೂ ಪ್ರಾಮಾಣಿಕತೆಯನ್ನು ಹೊಂದಿರಬೇಕು. ಇಲಾಖೆಯ ಜೊತೆಗೆ, ಕುಟುಂಬದ ಜೊತೆ ಉತ್ತಮ ಬಾಂಧವ್ಯ ಹೊಂದಿರುವ ಮಲ್ಲಿಕಾರ್ಜುನ ಕಂಪಲಿ ಅವರು ವಾರ್ತಾ ಇಲಾಖೆಯ ರಾಯಭಾರಿಗಳಂತೆ ಕಾರ್ಯನಿರ್ವಹಿಸಿದ್ದಾರೆ. ಮಾಧ್ಯಮ ಹಾಗೂ ಅಧಿಕಾರಿಗಳಿಗೆ ಪ್ರೀತಿ ಪಾತ್ರರಾಗಿದ್ದಾರೆ. ಅವರ ಸರಳ, ಸಜ್ಜನಿಕೆ ವ್ಯಕ್ತಿತ್ವ ಇತರರಿಗೆ ಮಾದರಿಯಾಗಿದೆ ಎಂದು ವಾರ್ತಾ ಇಲಾಖೆಯ ಬೆಳಗಾವಿ ಉಪ ನಿರ್ದೇಶಕ ಗುರುನಾಥ ಕಡಬೂರ ಅವರು ತಿಳಿಸಿದರು.

ಅವರು ಇಂದು (ಮೇ.30) ಸಂಜೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಭಾಭವನದಲ್ಲಿ ಜರುಗಿದ ವಾಹನ ಚಾಲಕ ಮಲ್ಲಿಕಾರ್ಜುನ ಕಂಪಲಿ ಅವರ ಸೇವಾ ನಿವೃತ್ತಿ ಬಿಳ್ಕೋಡುಗೆ ಸಮಾರಂಭದಲ್ಲಿ ಮಾತನಾಡಿದರು.

ವಾರ್ತಾ ಇಲಾಖೆಯಲ್ಲಿ ಸೇವೆ ಸಲ್ಲಿಸುವುದು ಸರ್ಕಾರ ಮತ್ತು ಆಡಳಿತದ ವರ್ಚಸ್ಸು ಹೆಚ್ಚಿಸುವಲ್ಲಿ ಹೆಚ್ಚು ಪ್ರಮುಖ ಪಾತ್ರ ನಿರ್ವಹಿಸಿದಂತೆ. ಮಲ್ಲಿಕಾರ್ಜುನ ಕಂಪಲಿ ಅಂತಹ ಸಿಬ್ಬಂದಿಗಳು ಮಾಧ್ಯಮ ಹಾಗೂ ಇತರರೊಂದಿಗೆ ಉತ್ತಮ ಬಾಂಧವ್ಯ ಹೊಂದುವ ಮೂಲಕ ಇಲಾಖೆಯ ಕೆಲಸ ಕಾರ್ಯಗಳನ್ನು ಸುಗಮಗೊಳಿಸುತ್ತಾರೆ ಎಂದರು.

ಓರ್ವ ಚಾಲಕನಾಗಿದ್ದು, ಇಬ್ಬರು ಪ್ರತಿಭಾವಂತ ಮಕ್ಕಳಿಗೆ ವೈದ್ಯಕೀಯ ಶಿಕ್ಷಣ ಕೊಡಿಸಿ, ವೈದ್ಯರನ್ನಾಗಿ ರೂಪಿಸಿರುವುದು ಅಧಿಕಾರಿಗಳಿಗೆ ಮಾದರಿಯಾಗಿದೆ. ಅವರ ಸೇವೆ ಹಾಗೂ ವಿನಯತೆ ವಾರ್ತಾ ಇಲಾಖೆಯ ಗೌರವವನ್ನು ಹೆಚ್ಚಿಸಿದ್ದಾರೆ ಎಂದು ವಾರ್ತಾ ಇಲಾಖೆಯ ಬೆಳಗಾವಿ ಉಪ ನಿರ್ದೇಶಕ ಗುರುನಾಥ ಕಡಬೂರ ಅವರು ಹೇಳಿದರು.

ವಾರ್ತಾ ಇಲಾಖೆಯ ವಿಶ್ರಾಂತ ಜಂಟಿ ನಿರ್ದೇಶಕ ಬಸವರಾಜ ಕಂಬಿ ಅವರು ಮಾತನಾಡಿ, ಬೆಳಗಾವಿ, ಧಾರವಾಡ ಹಾಗೂ ಹುಬ್ಬಳ್ಳಿಯಲ್ಲಿ ಅತ್ಯುತ್ತಮವಾಗಿ ಸೇವೆ ಸಲ್ಲಿಸಿದರು. ನನ್ನ ಆಡಳಿತ ಅವಧಿಯಲ್ಲಿ ನೇಮಕವಾದವರು. ಇಂದು ಅವರು ನಿವೃತ್ತರಾಗುತ್ತಿದ್ದಾರೆ. ಸರ್ಕಾರ ಕೆಲಸವನ್ನು ಪ್ರೀತಿಸಿ ಕಾರ್ಯನಿರ್ವಹಣೆ ಮಾಡುತ್ತಿದ್ದರು ಎಂದು ಅವರು ಹೇಳಿದರು.

ವಾರ್ತಾ ಇಲಾಖೆಯಲ್ಲಿ ಅತ್ಯುತ್ತಮ ಸೇವೆಗೈದಿದ್ದಾರೆ. ಅವರ ತಾಯಿಗೆ ಅನಾರೋಗ್ಯ ಪೀಡಿತರಾಗಿದ್ದಾಗ ಅವರನ್ನು ಉತ್ತಮ ರೀತಿಯಲ್ಲಿ ನೋಡಿಕೊಂಡಿದ್ದಾರೆ. ಕೆಲಸದ ಒತ್ತಡದ ನಡುವೆ ತಾಯಿ ಸೇವೆಯನ್ನು ಮಾಡಿದ್ದಾರೆ. ಮಕ್ಕಳು ಕೂಡ ಪ್ರತಿಭಾವಂತರಾಗಿದ್ದಾರೆ. ಅವರು ಕಷ್ಟಪಟ್ಟಿದ್ದಕ್ಕೂ ಮುಂದಿನ ಜೀವನ ಸುಖಕರವಾಗಿರಲಿ ಎಂದು ಹಾರೈಸಿದರು.

ವಾರ್ತಾ ಇಲಾಖೆಯ ವಿಶ್ರಾಂತ ಹಿರಿಯ ಸಹಾಯಕ ನಿರ್ದೇಶಕ ಪಿ.ಎಸ್.ಪರ್ವತಿ ಅವರು ಮಾತನಾಡಿ, ಬೆಂಗಳೂರಿನಲ್ಲಿ ಸಾಕಷ್ಟು ಚಿರಪರಿಚಿತರಾಗಿದ್ದರು. ಬೆಳಗಾವಿ ಅಧಿವೇಶನದಲ್ಲಿ ಮಾಧ್ಯಮದವರೊಂದಿಗೆ ಉತ್ತಮ ಒಡನಾಟ ಹೊಂದಿದ್ದರು. ಅಧಿಕಾರಗಳ ಜೊತೆ ಉತ್ತಮ ರೀತಿಯಲ್ಲಿ ವರ್ತಿಸುತ್ತಿದ್ದರು. ಅವರ ಸಮಯ ಪ್ರಜ್ಞೆಯನ್ನು ನಾವು ರೂಢಿಸಿಕೊಳ್ಳಬೇಕು ಎಂದು ಹರಿಸಿದರು.

ವಾರ್ತಾ ಇಲಾಖೆಯ ವಿಶ್ರಾಂತ ಹಿರಿಯ ಸಹಾಯಕ ನಿರ್ದೇಶಕ ಸಿ.ಪಿ.ಮಾಯಾಚಾರಿ ಅವರು ಮಾತನಾಡಿ, ವಸ್ತು ಪ್ರದರ್ಶನ ವಾಹನವನ್ನು ಅಚ್ಚುಕಟ್ಟಾಗಿ ಚಾಲನೆ ಮಾಡುತ್ತಿದ್ದರು. ಅವರು ವಾಹನ ಚಾಲನೆಯಲ್ಲಿ ಪರಿಣಿತಿಯನ್ನು ಹೊಂದಿದ್ದರು. ಮಾಧ್ಯಮದವರನ್ನು ಸಕಾಲಕ್ಕೆ ಕಾರ್ಯಕ್ರಮಕ್ಕೆ ಕರೆದುಕೊಂಡು ಹೋಗಿ ಸುರಕ್ಷಿತವಾಗಿ ಮರಳಿ ತಂದು ಬಿಡುತ್ತಿದ್ದರು ಎಂದು ಹೇಳಿದರು.

ಹಿರಿಯ ಪತ್ರಕರ್ತ ಗುರುರಾಜ ಜಮಖಂಡಿ ಅವರು ಮಾತನಾಡಿ, ಆರೋಗ್ಯ ಪೂರ್ಣವಾಗಿ ಅತ್ಯುತ್ತಮ ಸೇವೆ ಸಲ್ಲಿಸಿದ್ದಾರೆ. ಮಲ್ಲಿಕಾರ್ಜುನ ಕಂಪಲಿ ಅವರ ಜೊತೆ ಅವಿನಾಭಾವ ಸಂಬಂಧ ಹೊಂದಿದ್ದೇನೆ. ಟೈಮ್ಸ್ ಆಫ್ ಇಂಡಿಯಾ ಪತ್ರಿಕೆಯಲ್ಲಿ ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ಸಾಕಷ್ಟು ಉತ್ತಮ ಸೇವೆ ಸಲ್ಲಿಸಿದ್ದಾರೆ. ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ಮೂಲಕ ಡಾಕ್ಟರ್‌ರನ್ನಾಗಿ ಮಾಡಿದ್ದಾರೆ. ಅವರ ಬಗ್ಗೆ ಬಹಳಷ್ಟು ಹೆಮ್ಮೆ ವ್ಯಕ್ತಪಡಿಸುತ್ತೇನೆ. ಧಾರವಾಡ ಪತ್ರಕರ್ತರೊಂದಿಗೆ ನಗು ನಗುತ್ತಾ ಕೆಲಸ ಮಾಡುತ್ತಿದ್ದರು. ಮುದ್ದಿನ ಜೀವನದಲ್ಲಿ ಅವರು ಬೇರೆ ಬೇರೆ ಸ್ಥಳಗಳಿಗೆ ಪ್ರವಾಸ ಕೈಗೊಳ್ಳಿ. ಅವರ ಮುಂದಿನ ಜೀವನ ಸುಖಕರವಾಗಿರಲಿ ಎಂದು ಅವರು ಹೇಳಿದರು.

ಟಿವಿ 9 ವಾಹಿನಿಯ ಹಿರಿಯ ವರದಿಗಾರ ನರಸಿಂಹಮೂರ್ತಿ ಪ್ಯಾಟಿ ಅವರು ಮಾತನಾಡಿ, ಸಂಗಪ್ಪ ಮತ್ತು ಮಲ್ಲಿಕಾರ್ಜುನ ಕಂಪಲಿ ಇಬ್ಬರು, ವಾರ್ತಾ ಇಲಾಖೆ ನಮ್ಮ ಜೊತೆ ಇದ್ದಂತೆ ಎಂದು ಭಾಸವಾಗುತ್ತಿತ್ತು. ವಾಹನ ಚಾಲನೆಯಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದರು. ಅವರ ನೋಡಿ ವಾಹನ ಚಾಲನೆ ಮಾಡುವುದನ್ನು ಕಲಿಯಬೇಕು. ಅಷ್ಟರಮಟ್ಟಿಗೆ ಅವರ ವಾಹನ ಚಾಲನೆಯಲ್ಲಿ ಪರಿಣಿತಿಯನ್ನು ಹೊಂದಿದ್ದರು. ಹಿರಿಯ ಕಿರಿಯರಿಗೆ ಅವರು ನೀಡುತ್ತಿದ್ದ ಗೌರವ ವರ್ತನೆಯನ್ನು ನಾವು ಅಳವಡಿಸಿಕೊಳ್ಳಬೇಕು. ಅವರ ವ್ಯಕ್ತಿತ್ವ ನಮಗೆ ಮಾದರಿಯಾಗಿದೆ ಎಂದು ಅವರು ತಿಳಿಸಿದರು.

ಪಬ್ಲಿಕ್ ಟಿವಿಯ ಹಿರಿಯ ವರದಿಗಾರ ಜಾವೀದ ಅಧೋನಿ ಅವರು ಮಾತನಾಡಿ, ಒಳ್ಳೆಯ ವ್ಯಕ್ತಿತ್ವವನ್ನು ಹೊಂದಿದವರು. ಅವರಿಗೆ ಯಾವುದೇ ರೀತಿಯ ಅಹಂ ಇರಲಿಲ್ಲ. ಅವರ ವೃತ್ತಿಯನ್ನು ಅತ್ಯಂತ ಅನ್ಯೋನ್ಯವಾಗಿ ಕಳೆದಿದ್ದಾರೆ. ಮಾಧ್ಯಮದವರೊಂದಿಗೆ ಅತೀ ಆತ್ಮೀಯತೆಯಿಂದ ಒಡನಾಟ ಹೊಂದಿದ್ದರು ಎಂದು ಅವರು ಹೇಳಿದರು.

ಕನ್ನಡ ಪ್ರಭ ಪತ್ರಿಕೆಯ ಹಿರಿಯ ಪ್ರಧಾನ ವರದಿಗಾರ ಬಸವರಾಜ ಹಿರೇಮಠ ಅವರು ಮಾತನಾಡಿ, ಮಾಧ್ಯಮದವರನ್ನು ಅತ್ಯಂತ ಸುರಕ್ಷತೆಯಿಂದ ಕರೆದುಕೊಂಡು ಹೋಗಿ ಬರುತ್ತಿದ್ದರು. ಅವರ ಹಾಗೆ ನಾವು ಜೀವನ ನಡೆಸೋಣ. ಅವರಿಗೆ ಆಯುಷ್ಯ ಆರೋಗ್ಯ ದೇವರು ನೀಡಲಿ ಎಂದು ಅವರು ಹಾರೈಸಿದರು.

ಕಂಪಲಿಯವರ ಹಿರಿಯ ಪುತ್ರ ಡಾ. ಮಿಥುನ್ ಹಾಗೂ ಡಾ. ಮಹೇಶ ಕಂಪಲಿ ಅವರು ಮಾತನಾಡಿ, ಮಕ್ಕಳು ಉನ್ನತ ಸ್ಥಾನವನ್ನು ಅಲಂಕರಿಸುವುದು ನಮ್ಮ ತಂದೆಯವರ ಕನಸಾಗಿತ್ತು. ಅವರ ಕನಸಿನಂತೆ ಉತ್ತಮ ಶಿಕ್ಷಣ ಪಡೆದಿದ್ದೇವೆ. ನಮ್ಮ ತಾಯಿ ಅವರು ಸಹ ಸಾಕಷ್ಟು ಪ್ರೋತ್ಸಾಹ ನೀಡಿದ್ದಾರೆ ಎಂದರು.

ಸನ್ಮಾನ ಸ್ವೀಕರಿಸಿದ ಮಲ್ಲಿಕಾರ್ಜುನ ಕಂಪಲಿ ಅವರು ಮಾತನಾಡಿ, ವಾರ್ತಾ ಇಲಾಖೆಯ ಸುದೀರ್ಘ ಸೇವೆಯ ಸಮಯದಲ್ಲಿ ನಾನು ಸಾಕಷ್ಟು ಕಲಿತಿದ್ದೇನೆ. ಪ್ರಾರಂಭದಲ್ಲಿ ಎಲ್ಲವೂ ಹೊಸದು, ಅಸ್ಪಷ್ಟವೂ ಆಗಿತ್ತು. ಆದರೆ ಪ್ರತಿಯೊಂದು ಸವಾಲು ನನ್ನನ್ನು ಬಲಿಷ್ಠ ಮಾಡಿತು. ಸಹೋದ್ಯೋಗಿಗಳ ಸಹಕಾರ ಮತ್ತು ಮಾಧ್ಯಮದವರ ವಿಶ್ವಾಸ ನನಗೆ ಸದಾ ಪ್ರೇರಣೆ ನೀಡುತ್ತಿತ್ತು. ನನ್ನ ಜೀವನದಲ್ಲಿ ಪ್ರತಿ ಕ್ಷಣವೂ ಕಡೆಯವರೆಗೂ ನನಗೆ ನೆನಪು ಆಗುವಂತಿದೆ ಎಂದು ಇಂದು ಸೇವಾ ನಿವೃತ್ತಿ ಹೊಂದಿರುವ ಮಲ್ಲಿಕಾರ್ಜುನ ಕಂಪಲಿ ಅವರು ಹೇಳಿದರು.

ನಾನು ಯಾವಾಗಲೂ ಸಹೋದ್ಯೋಗಿಗಳೊಂದಿಗೆ ಹಾಗೂ ಪತ್ರಕರ್ತರೊಂದಿಗೆ ನಿಷ್ಠೆ ಮತ್ತು ಆತ್ಮೀಯತೆಯಿಂದ ನಡೆದುಕೊಂಡೆ. ಯಾವತ್ತೂ ಬೇಧಭಾವವಿಲ್ಲದೆ, ಎಲ್ಲರೊಂದಿಗೆ ಸಮಾನ ಮನೋಭಾವದಿಂದ ಸಂಪರ್ಕ ಹೊಂದಿದ್ದೇನೆ. ವಾರ್ತಾ ಇಲಾಖೆಯ ಸಿಬ್ಬಂದಿ ಮತ್ತು ಮಾಧ್ಯಮದವರೊಂದಿಗೆ ಬೆಳೆಸಿಕೊಂಡ ಸಂಬಂಧವು ನನ್ನ ಜೀವನದ ಅತ್ಯಂತ ಅಮೂಲ್ಯ ಭಾಗವಾಗಿದೆ ಎಂದು ಅವರು ಹೇಳಿದರು.

ಧಾರವಾಡ ಜಿಲ್ಲೆಗೆ ಬಂದಿದ್ದೆ ಒಂದು ಪವಾಡದಂತಿತ್ತು. 2019 ರಿಂದ ಕ್ಷೇತ್ರ ಪ್ರಚಾರ ಅಂತ್ಯವಾಯಿತು. ಹಾಗೂ ಮಾಧ್ಯಮದವರು ನನ್ನ ಮೇಲೆ ಅತಿಯಾದ ವಿಶ್ವಾಸ ಹೊಂದಿದ್ದರು. ಮಾಧ್ಯಮದವರ ಜೊತೆ ಆತ್ಮೀಯತೆಯು ಒಂದು ಕುಟುಂಬದ ರೀತಿಯಲ್ಲಿ ನಾವು ಇದ್ದೆವು ಹಾಗೂ ವಾರ್ತಾ ಇಲಾಖೆ ಹಾಗೂ ಪತ್ರಕರ್ತರು ಅವಿನಾಭಾವ ಸಂಬಂಧವನ್ನು ನಾವೆಲ್ಲರೂ ಹೊಂದಿದ್ದೇವೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಮಾಧ್ಯಮ ಪ್ರತಿನಿಧಿಗಳಾದ ಬಸವರಾಜ ಪಟಾತ್, ಪರಮೇಶ ಅಂಗಡಿ, ಮಂಜುನಾಥ ಯಡಳ್ಳಿ, ಶ್ರೀಧರ ಮುಂಡರಗಿ, ಶಶೀಧರ ಬುದ್ನಿ, ನಾಗರಾಜ ಮಗದುಮ್, ಪ್ರವೀಣ ಓಂಕಾರಿ, ಗುರು ಪಾಟೀಲ, ಪ್ರಶಾಂತ ದಿನ್ನಿ, ರಾಹುಲ್ ಹೂಲಿ, ಅಕ್ಷಯ ಕಮತಗಿ ಸೇರಿದಂತೆ ಇತರರು ಮಲ್ಲಿಕಾರ್ಜುನ ಕಂಪಲಿ ಅವರ ಕುರಿತು ಮಾತನಾಡಿದರು.

ಕಾರ್ಯಕ್ರಮದಲ್ಲಿ ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕ (ಪ್ರ) ಡಾ. ಸುರೇಶ ಹಿರೇಮಠ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಬೆಳಗಾವಿ ಕಚೇರಿಯ ಅನಂತ ಪಪ್ಪು ವಂದಿಸಿದರು.

ಕಾರ್ಯಕ್ರಮದಲ್ಲಿ ವಾರ್ತಾ ಇಲಾಖೆಯ ನಿವೃತ್ತ ಅಧಿಕಾರಿ, ಸಿಬ್ಬಂದಿಗಳು, ಬೆಳಗಾವಿ, ಹುಬ್ಬಳ್ಳಿ, ಧಾರವಾಡ ವಾರ್ತಾ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳು, ಮಾಧ್ಯಮ ಪ್ರತಿನಿಧಿಗಳು ಹಾಗೂ ಮಲ್ಲಿಕಾರ್ಜುನ ಕಂಪಲಿ ಅವರ ಕುಟುಂಬ ಸದಸ್ಯರು ಭಾಗವಹಿಸಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001